ಸಂಪುಟ 01 । ಸಂಚಿಕೆ 48 । ಸೋಮವಾರ 05 ಜನವರಿ 2026 । ಪುಟ 4 । ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

MA ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1) ರಾಷ್ಟ್ರೀಯ ಪಕ್ಷಿ ದಿನ (National Bird Day)**

ರಾಷ್ಟ್ರೀಯ ಪಕ್ಷಿ ದಿನವನ್ನು ಪ್ರತಿವರ್ಷ ಜನವರಿ 5ರಂದು ಆಚರಿಸಲಾಗುತ್ತದೆ. ಈ ದಿನವು ಪಕ್ಷಿಗಳ ಸಂರಕ್ಷಣೆ, ಅವುಗಳ ಮಹತ್ವ ಮತ್ತು ಪ್ರಕೃತಿಯ ಸಮತೋಲನದಲ್ಲಿ ಅವುಗಳ ಪಾತ್ರದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವುದಕ್ಕಾಗಿ

## ಸುಭಾಷಿತ

ಆರೋಗ್ಯ ಎಂಬುದು ದೊಡ್ಡ ಕೊಡುಗೆ, ಸಂತೃಪ್ತಿ ಎಂಬುದು ದೊಡ್ಡ ಸಂಪತ್ತು ಹಾಗೂ ವಿಶ್ವಾಸಾರ್ಹತೆ ಎಂಬುದು ಅತ್ಯುತ್ತಮ ಸಂಬಂಧ.

–ಗೌತಮ ಬುದ್ಧ

## ಶ್ರೀರಾಮಲಿಂಗ ಚೌಡೇಶ್ವರಿ ಕುಂಭಮೇಳ

ನೈಜ್ಯ ದೆಸೆ ನ್ಯೂಸ್

ದೇವದುರ್ಗ : ಬನದಹುಣ್ಣಿಮೆ ನಿಮಿತ್ತ ಪಟ್ಟಣದ ಅಬ್ಬು ಮೊಹಲ್ಲಾ ಏರಿಯಾದಲ್ಲಿನ ಶ್ರೀರಾಮಲಿಂಗ ಚೌಡೇಶ್ವರಿ ದೇವಸ್ಥಾನದಲ್ಲಿ ಶನಿವಾರ ವಿಶೇಷ ಪೂಜೆ ಹಾಗೂ ಕುಂಭಮೇಳ ಶ್ರದ್ಧಾಭಕ್ತಿಯಿಂದ ಜರುಗಿತು.ಬೆಳಗ್ಗೆ 6ಕ್ಕೆ ಕೃಷ್ಣಾ ನದಿಗೆ ತೆರಳಿ ಗಂಗೆ ಪೂಜೆ ಮಾಡಿ ನದಿಯ ನೀರು ತಂದು ದೇವಿಗೆ ಜಲಾಭಿಷೇಕ ಮಾಡಲಾಯಿತು. ನಂತರ 7 ಗಂಟೆಯಿಂದ ವಿವಿಧ ರೀತಿಯ ಪೂಜೆಗಳು ಜರುಗಿದವು. ತದನಂತರ ಶ್ರೀರಾಮಲಿಂಗ ದೇವರು ಹಾಗೂ ಚೌಡೇಶ್ವರಿ ತಾಯಿ ಮೂರ್ತಿ ಹಾಗೂ ಭಾವಚಿತ್ರ ಮೆರವಣಿಗೆ ನಡೆಯಿತು.ಮಹಿಳೆಯರ ಕುಂಭ ಕಳಸ, ಬಾಜಾಭಜಂತ್ರಿ ತಂಡಗಳು ಭಾಗವಹಿಸಿದ್ದವು. ಗೋಸಿ ಮಠಕ್ಕೆ ತೆರಳಿ ಅಲ್ಲಿಂದ ಕುಂಭಮೇಳದೊಂದಿಗೆ ದೇವಸ್ಥಾನಕ್ಕೆ ಮರಳಲಾಯಿತು. ತದನಂತರ 108 ನಾಮಾವಳಿ ಘೋಷಣೆಗಳೊಂದಿಗೆ ಬಿಲ್ವಪತ್ರಿ ಪೂಜೆ, ಹೂವಿನ ಅಲಂಕಾರ, ಭಕ್ತರಿಗೆ ಅನ್ನಸಂತರ್ಪಣೆ ಕಾರ್ಯಕ್ರಮ ನಡೆಯಿತು. ಸುತ್ತಮುತ್ತಲಿನ ಹಳ್ಳಿಗಳ ನೂರಾರು ಭಕ್ತರು ಆಗಮಿಸಿ ದರ್ಶನ ಪಡೆದರು.



ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

ಸುದ್ದಿ ಹಾಗೂ ಜಾಹಿರಾತಿಗಾಗಿ ಸಂಪರ್ಕಿಸಿ
9902277588, 9880707587, 9008787586

# ರಾಯಚೂರು ಉತ್ಸವ ಸಿದ್ಧತೆ; ಎಲ್ಲ ಜನಪ್ರತಿನಿಧಿಗಳ ಸಭೆ ಉತ್ಸವದ ಬೃಹತ್ ವೇದಿಕೆಗಳ, ನಾನಾ ಕಾರ್ಯಕ್ರಮಗಳ ಸ್ವರೂಪದ ಪ್ಲಾನ್ ವೀಕ್ಷಣೆ ನಡೆಸಿದ ಸಚಿವರು, ಶಾಸಕರು






ನೈಜ್ಯ ದೆಸೆ ನ್ಯೂಸ್

**ರಾಯಚೂರು ಜನವರಿ 04 (ಕರ್ನಾಟಕ ವಾರ್ತೆ):** ಜನವರಿ 29, 30 ಹಾಗೂ 31ರಂದು ನಿಗದಿಯಾದ ರಾಯಚೂರು ಉತ್ಸವ–2026ರ ವೇದಿಕೆಯ ಹಾಗೂ ನಾನಾ ಕಾರ್ಯಕ್ರಮಗಳ ಸಮಗ್ರ ಸ್ವರೂಪದ ಪ್ರಾತ್ಯಕ್ಷಿಕೆಯನ್ನು ಸಚಿವರಾದ ಡಾ.ಶರಣಪ್ರಕಾಶ ಪಾಟೀಲ, ಎನ್ ಎಸ್ ಬೋಸರಾಜು, ಶಾಸಕರಾದ ಹಂಪನಗೌಡ ಬಾದರ್ಲಿ, ಬಸನಗೌಡ ದದ್ದಲ್, ಡಾ. ಎಸ್.ಶಿವರಾಜ ಪಾಟೀಲ, ಬಸನಗೌಡ ತುರವಿಹಾಳ, ಹಂಪಯ್ಯ ನಾಯಕ, ಎ ವಸಂತಕುಮಾರ ಹಾಗೂ ಇನ್ನೀತರರು ವೀಕ್ಷಣೆ ನಡೆಸಿದರು.ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜನವರಿ 4ರಂದು ನಡೆದ ಜನಪ್ರತಿನಿಧಿಗಳೊಂದಿಗಿನ ಸಭೆಯಲ್ಲಿ ಸಚಿವರು ಹಾಗೂ ಶಾಸಕರು ಮಾತನಾಡಿ, ಉತ್ಸವಕ್ಕೆ ಸಂಬಂಧಿಸಿದಂತೆ ನಾನಾ ಸಲಹೆಗಳು ಮತ್ತು ಸೂಚನೆಗಳನ್ನು ನೀಡಿದರು.ಎಲ್ಲ ಸಮಿತಿಗಳ ಮೇಲೆ ಮೇಲ್ವಿಚಾರಣಾ ಸಮಿತಿಯೊಂದನ್ನು ರಚಿಸಿ ಪ್ರತಿ ನಿತ್ಯ ಎಲ್ಲ ತಯಾರಿಯ ಮೇಲ್ವಿಚಾರಣೆ ಆಗಬೇಕು. ಕೂಡಲೇ ಜಿಲ್ಲೆಯ ಎಲ್ಲ ಸಂಘ–ಸಂಸ್ಥೆಗಳ, ಅಂಗಡಿಕಾರರ ಸಭೆ ನಡೆಸಿ ಅವರ ಸಲಹೆ ಪಡೆಯಬೇಕು. ಆಯಾ ತಹಸೀಲ್ದಾರರು ಹಾಗೂ ತಾಪಂ ಇಒಗಳು ಆಯಾ ತಾಲೂಕಿನಲ್ಲಿ ಸಭೆ ನಡೆಸಬೇಕು. ಅಧಿಕಾರಿಗಳು ಮತ್ತು ಸಿಬ್ಬಂದಿ ತಂಡವಾಗಿ ಕೆಲಸ ಮಾಡಿ ಕಾರ್ಯನಿರ್ವಹಿಸಬೇಕು. ಜಿಲ್ಲೆಯ ಎಲ್ಲ ಶಾಲಾ ಕಾಲೇಜುಗಳ ಆಡಳಿತ ಮಂಡಳಿಯ ಮುಖ್ಯಸ್ಥರ ಸಭೆ ನಡೆಸಬೇಕು. ಜಿಲ್ಲೆಯ ಎಲ್ಲ ಸಾಹಿತಿಗಳು, ಕಲಾವಿದರು, ಕವಿಗಳು, ವಕೀಲರು, ಮಹಿಳಾ ಸಂಘಗಳು, ಆಟೋ ಹಾಗೂ ವಿವಿಧ ವಾಹನ ಚಾಲಕರು, ಯುವ ಸಂಘಟನೆಗಳು ಮತ್ತು ನಾಗರಿಕ ಸಮಿತಿಗಳು ಸೇರಿದಂತೆ ಬೇರೆಲ್ಲ ಜನ ಸಮುದಾಯಗಳ ಸಭೆಗಳು ಆಗಬೇಕು. ಎಲ್ಲ ಶಾಲೆಗಳ ಶಿಕ್ಷಕರ ಹಾಗೂ ಕಾಲೇಜು ಉಪನ್ಯಾಸಕರ ಸಭೆಗಳು ಆಗಬೇಕು ಎಂದು ಸಚಿವರು ಶಾಸಕರು ಸಲಹೆ ಮಾಡಿದರು. ವಾಲ್ಮೀಕಿ ವಿಶ್ವವಿದ್ಯಾಲಯ ಸೇರಿದಂತೆ ಮಹತ್ವದ ಬೇರೆ ಬೇರೆ ವಿದ್ಯಾ ಸಂಸ್ಥೆಗಳಲ್ಲಿ ಸಹ ಬೇರೆ ಬೇರೆ ಕಾರ್ಯಕ್ರಮಗಳ ಆಯೋಜನೆ ಮಾಡಲು ಸಲಹೆ ಮಾಡಿದರು.ಉತ್ಸವದ ಲೋಗೋ ವೀಕ್ಷಣೆ: ಸಭೆಯಲ್ಲಿ ಮೊದಲಿಗೆ ರಾಯಚೂರು ಉತ್ಸವದ ಲೋಗೊ ವೀಕ್ಷಣೆ ನಡೆಯಿತು. ಮುಖ್ಯ ಕಾರ್ಯಕ್ರಮದ ವೇದಿಕೆ ಹಾಗೂ ಹೆಸರಾಂತ ಕಲಾವಿದರು ಭಾಗಿಯಾಗುವ ಬೃಹತ್ ವೇದಿಕೆಗಳ ಪ್ರಾತ್ಯಕ್ಷಿಕೆಯ ವೀಕ್ಷಣೆಯ ನಡೆಯಿತು.ಈ ವೇಳೆ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಮಾತನಾಡಿ, ಹತ್ತಾರು ವರ್ಷಗಳ ನಂತರ ಉತ್ಸವ ನಡೆಯುತ್ತಿದೆ. ಹಾಗಾಗಿ ಎಲ್ಲರನ್ನು ಒಳಗೊಂಡು ಉತ್ಸವ ನಡೆಯಬೇಕು. ಅಧಿಕಾ–ರಿಗಳು ಉತ್ಸವದ ಕಾರ್ಯಗಳನ್ನು ಹಗರುವಾಗಿ ತೆಗೆದುಕೊಳ್ಳಬಾರದು. ಇದು ರಾಯಚೂರು ಸಿಟಿ ಉತ್ಸವ ಅಲ್ಲ; ಜಿಲ್ಲಾ ಉತ್ಸವವಾಗಿದೆ. ಹಾಗಾಗಿ ಎಲ್ಲರೂ ಪಕ್ಷಬೇಧ ಮರೆತು ಒಗ್ಗೂಡಿ ಉತ್ಸವ ಮಾಡೋಣ ಎಂದು ಸಲಹೆ ಮಾಡಿದರು.ಉತ್ಸವ ಬೇರೆ ಬೇರೆ ರೀತಿ ನಡೆಯುತ್ತದೆ. ಕ್ರೀಡಾ ಚಟುವಟಿಕೆ ಈಗ ಆರಂಭವಾಗಿವೆ. ರಾಜ್ಯಮಟ್ಟದ ವಾಲಿಬಾಲ್, ಕಬ್ಬಡ್ಡಿ ಪಂದ್ಯ ನಡೆಯಲಿವೆ. ಸ್ಕೇಟಿಂಗ್ ಮ್ಯಾರಾಥಾನ್, ಸ್ಕೇಟಿಂಗ್ ಓಟ, ಕುಸ್ತಿ ಪಂದ್ಯ, ಸಂಗ್ರಾಣಿ ಕಲ್ಲು ಎತ್ತುವ ಸ್ಪರ್ಧೆಗಳು ನಡೆಯಲಿವೆ. ಜನವರಿ 29ರಂದು ಬೆಳಗ್ಗೆ ಮೆರವಣಿಗೆ, ಸಂಜೆ 5ರಿಂದ ಉತ್ಸವದ ಉದ್ಘಾಟನೆ ನಡೆಯಲಿದೆ. ಜಿಲ್ಲಾ ರಂಗಮಂದಿರದಲ್ಲಿ, ಕೃಷಿ ವಿವಿ ಆವರಣದಲ್ಲಿನ ಕಾನ್ಫರೆನ್ಸ್ ಹಾಲ್ ಸೇರಿದಂತೆ ಒಟ್ಟು ನಾಲ್ಕು ಕಡೆಗಳಲ್ಲಿ ಏಕಕಾಲಕ್ಕೆ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ವ್ಯವಸ್ಥೆ ಮಾಡಲಾಗಿದೆ. ಜನವರಿ 30ರಂದು ಬೆಳಗ್ಗೆ ಉದ್ಯೋಗ ಮೇಳ ನಡೆಯಲಿದೆ. ಫಲಪುಷ್ಪ ಮೇಳವನ್ನು ದೊಡ್ಡ ಪ್ರಮಾಣದಲ್ಲಿ ಮಾಡಲಾಗುತ್ತಿದೆ. ಮತ್ಸಮೇಳ, ಡಾಗ್ ಶೋ, ಶಾಲಾ ಮಕ್ಕಳಿಗಾಗಿ ಪ್ರಬಂಧ, ಸಾಹಿತಿಗಳಿಂದ ಕವಿಗೋಷ್ಠಿ, ಮಹಿಳಾ ಗೋಷ್ಠಿ, ಮಾಧ್ಯಮ ಗೋಷ್ಠಿ ನಡೆಸಲಾಗುತ್ತದೆ. ಆಹಾರ ಮೇಳ ನಡೆಸಿ100 ಸ್ಟಾಲಗಳ ಅಳವಡಿಕೆಗೆ ಯೋಜನೆ ಮಾಡಿದ್ದೇವೆ. ಜನವರಿ 31ರಂದು ಗ್ಯಾರಂಟಿ ಮೇಳ ಬೆಳಗ್ಗೆ 10 ದಿಂದ 2 ಗಂಟೆವರೆಗೆ ಜೊತೆಗೆ ಕೃಷಿ ಮೇಳ ನಡೆಸಲು ಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಸಭೆಗೆ ವಿವ–ರಿಸಿದರು.ಸಭೆಯಲ್ಲಿ ತಾಲೂಕು ಗ್ಯಾರಂಟಿ ಸಮಿತಿಯ ಪವನ್ ಕಿಶೋರ್ ಪಾಟೀಲ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಕ್ಷು ಗಿರಿ, ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ಪಾಲಿಕೆಯ ಸಮಿತಿ ಕಾರ್ಯದರ್ಶಿ ಕೃಷ್ಣ ಶಾವಂತಗೇರಿ, ತಹಸೀಲ್ದಾರ ಸುರೇಶ ವರ್ಮಾ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಇದ್ಧರು.ಸತ್ಯವಂತಿ ದೇಶಪಾಂಡೆ ಪ್ರಾರ್ಥಿಸಿದರು.

# ಸಮಾಜ ಸೇವಕ ಪ್ರಭು ಭೈರಿ ಕಾರ್ಯ ಶ್ಲಾಘನೀಯ: ಮುಖಂಡ ಭೂವಿ



ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ: ಸಮಾಜ ಸೇವೆಯ ಹೆಸರಿನಲ್ಲಿ ಕೇವಲ ತಮ್ಮ ಸ್ವಾರ್ಥವನ್ನೇ ಈಡೇರಿಸಿಕೊಳ್ಳುವ ಇಂದಿನ ದಿನಮಾನದಲ್ಲಿ ತಾನು ಜನಿಸಿದ ಗ್ರಾಮ ಅಭಿವೃದ್ಧಿಯಾಗಬೇಕು ಎಂಬ ಕಳಕಳಿಯಿಂದ ರೂ.25 ಲಕ್ಷ ಸ್ವಂತ ಹಣದಲ್ಲಿ ಸಿಸಿ ರಸ್ತೆ ಹಾಗೂ ಸಾರ್ವಜನಿಕ–ರಿಗಾಗಿ ಕುಡಿಯುವ ನೀರಿನ ಟ್ಯಾಂಕ್ ನಿರ್ಮಾಣ ಮಾಡಿ ಪ್ರಭು ಭೈರಿಯವರು ಶ್ಲಾಘನೀಯ ಕಾರ್ಯ ಮಾಡಿದ್ದಾರೆ ಎಂದು ಮುಖಂಡ ಅಶೋಕ ಭೂವಿ ಹೇಳಿದರು. ತಾಲೂಕಿನ ಕಲಕೇರಿ ಗ್ರಾಮದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಸಂತೆ ಮಾರಕಟ್ಟೆ ಹಾಗೂ ವಾಣಿಜ್ಯ ಮಳಿಗೆಗಳ ಆವರಣದಲ್ಲಿ ವಿಶ್ವನಾಥ್ ಭೈರಿ ಮತ್ತು ಜಗನ್ನಾಥ ಭೈರಿ ಅವರ ಸ್ವರಣಾರ್ಥವಾಗಿ ಪ್ರಭು ಜಯಪ್ಪ ಭೈರಿ ಅವರು ನಿರ್ಮಿಸಿದ ಕುಡಿಯುವ ನೀರಿನ ಟ್ಯಾಂಕ್ ಮತ್ತು ಸಿಸಿ ರಸ್ತೆ ಉದ್ಘಾಟನಾ ಕಾರ್ಯಕ್ರಮದಲ್ಲಿ ಅವರು ರವಿವಾರ ಮಾತನಾಡಿದರು. ಮುಖಂಡ ಹಣಮಂತ ವಡ್ಡರ್ ಮಾತನಾಡಿ ಪ್ರಭು ಭೈರಿಯವರು ಈಗಾಗಲೇ ಗ್ರಾಮದ ಕೆಲವು ಕಡೆ ಸಿಸಿ ರಸ್ತೆಗಳನ್ನು ಹಾಗೂ ಹಲವಾರು ಸಮಾಜ ಸೇವಾ ಕಾರ್ಯಗಳನ್ನು ಮಾಡಿದ್ದಾರೆ ಅವರಿಗೆ ನಾವೆಲ್ಲರೂ ಸಹಕರಿಸುವ ಅಗತ್ಯ ಇದೆ ಎಂದರು. ಗಣ್ಯರಾದ ರಾಘು ದೇಸಾಯಿ ಹಾಗೂ ಶಾಂತು ಹೊಸಗೌಡರ ನೇತೃತ್ವದಲ್ಲಿ ಉದ್ಘಾಟನೆ ಜರುಗಿ–ತು. ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷ ರಾಜ ಅಹ್ಮದ್ ಸಿರಸಗಿ, ಗಣ್ಯರಾದ ಕೆ.ಡಿ.ದೇಸಾಯಿ, ರಾಮರಾವ್ ದೇಶಮುಖ, ರಾಜು ಜಂಬಗಿ, ವಿನೋದ್ ವಡಗೇರಿ, ಮುತ್ತು ಬೆಂಡೆಗೊಂಬಳ, ಸುನಿಲ್ ಜಂಗಣಿ, ದೇವೇಂದ್ರ ಬಡಿಗೇರ, ವಿಶ್ವ ಮೋಪಗಾರ, ಉಮೇಶ ಹೆಗ್ಗಣದೊಡ್ಡಿ ಫಾರೂಕ್ ವಲ್ಲಿಬಾಯಿ, ಸಂಗಪ್ಪ ಗೌಂಡಿ, ಭೀಮಣ್ಣ ವಡ್ಡರ, ಮಹೆಬೂಬ ಬಾಶಾ ಮನಗೂಳಿ, ಪರುಶರಾಮ ವಡ್ಡರ,ಗ್ರಾಮ ಪಂಚಾಯತ್ ಸರ್ವ ಸದಸ್ಯರು ಹಾಗೂ ಗ್ರಾಮಸ್ಥರು ಇದ್ದರು.

# ಸಿಬ್ಬಂದಿ ಕುಟುಂಬಗಳಿಗೆ ಸಂಪೂರ್ಣ ವಿಮಾ ಭದ್ರತೆ ಒದಗಿಸಲು ಕ್ರಮ – ಸಚಿವ ಡಾ. ಶರಣಪ್ರಕಾಶ್ ಆರ್.ಪಾಟೀಲ್



ನೈಜ್ಯ ದೆಸೆ ನ್ಯೂಸ್

ಸರ್ಕಾರದ ಆಡಳಿತದಲ್ಲಿ ಪ್ರಮುಖ ಪಾತ್ರ ವಹಿಸುವ ಸಿಬ್ಬಂದಿಗಳಿಗೆ ಸೂಕ್ತ ವಿಮಾ ಭದ್ರತೆ ಒದಗಿವುಸುದು ಮುಖ್ಯ. ಈ ನಿಟ್ಟಿನಲ್ಲಿ ಸಿಬ್ಬಂದಿ ಸ್ನೇಹಿ ಕ್ರಮ ಕೈಗೊಳ್ಳಲು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಜೀವನೋಪಾಯ ಸಚಿವ ಡಾ. ಶರಣಪ್ರಕಾಶ್ ಆರ್.ಪಾಟೀಲ್ ಮುಂದಾಗಿದ್ದಾರೆ. ವೈದ್ಯಕೀಯ ಶಿಕ್ಷಣ ಇಲಾಖೆ ವ್ಯಾಪ್ತಿಯ ಎಲ್ಲ ಅಧಿಕಾರಿಗಳಿಗೆ, ಸಿಬ್ಬಂದಿಗೆ ಮತ್ತು ಕುಟುಂಬ ಸದಸ್ಯರಿಗೆ ವಿಮಾ ಭದ್ರತೆ ಒದಗಿಸಲು ಕ್ರಮ ಕೈಗೊಂಡಿದ್ದಾರೆ. ಕಳೆದ ತಿಂಗಳು ರಸ್ತೆ ಅಪಘಾತದಲ್ಲಿ ನಿಧನರಾದ ಐಎಎಸ್ ಅಧಿಕಾರಿ ಮಹಾಂತೇಶ್ ಬೀಳಗಿ ಅವರ ಕುಟುಂಬ ಸದಸ್ಯರು ವಿಮಾ ಹಣ ಪಡೆಯಲು ತಾಂತ್ರಿಕ ಸಮಸ್ಯೆಗಳು ಎದುರಾದ ಹಿನ್ನೆಲೆಯಲ್ಲಿ ಸಚಿವ ಡಾ. ಶರಣಪ್ರಕಾಶ್ ಆರ್. ಪಾಟೀಲ್ ಅವರು ತಮ್ಮ ಇಲಾಖೆಯ ಅಡಿಯಲ್ಲಿರುವ ಎಲ್ಲಾ ವೈದ್ಯರು, ಅಧಿಕಾರಿಗಳು ಮತ್ತು ಸಿಬ್ಬಂದಿ ಸಾಮಾಜಿಕ ಭದ್ರತಾ ಕ್ರಮವಾಗಿ ಕಡ್ಡಾಯವಾಗಿ ಟರ್ಮ್ ಇನ್ಶೂರೆನ್ಸ್ ಪಡೆಯಬೇಕೆಂದು ಸೂಚಿಸಿದ್ದಾರೆ.ಎಲ್ಲಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ ವೈದ್ಯರು, ಅಧಿಕಾರಿಗಳು ಮತ್ತು ಸಿಬ್ಬಂದಿಗಳು ತಮ್ಮ ಪ್ರಸ್ತುತ ಸಂಬಳ ಮತ್ತು ಹುದ್ದೆಗೆ ಅನುಗುಣವಾಗಿ ಟರ್ಮ್ ವಿಮೆ ಪಡೆಯುವುದನ್ನು ಕಡ್ಡಾಯಗೊಳಿಸಬೇಕು ಎಂದು ಆದೇಶ ಹೊರಡಿಸುವಂತೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಮೊಹಮ್ಮದ್ ಮೊಹ್ಸಿನ್ ಅವ–ರಿಗೆ ಸೂಚಿಸಿದ್ದಾರೆ.ಉದ್ಯೋಗಿಯ ದುರದೃಷ್ಟಕರ ಸಂದರ್ಭದಲ್ಲಿ ಕುಟುಂಬಗಳು ಪೂರ್ಣ ಅರ್ಹ ಟರ್ಮ್ ವಿಮಾ ಮೊತ್ತವನ್ನು ಪಡೆಯುವುದನ್ನು ಖಚಿತಪಡಿಸಿಕೊಳ್ಳಬೇಕು. ವಿಶೇಷವಾಗಿ ಕಡಿಮೆ ವೇತನ ಶ್ರೇಣಿಯಲ್ಲಿರುವವರು, ಹಣಕಾಸಿನ ಕೊರತೆ ಅಥವಾ ಅರಿವಿನ ಕೊರತೆಯಿಂದಾಗಿ ವಿಮೆಯನ್ನು ಆಯ್ಕೆ ಮಾಡಿಕೊಂಡಿಲ್ಲದಿರಬಹುದು. ಈ ನಿಟ್ಟಿನಲ್ಲಿ ಅವರಿಗೆ ಅರಿವು ಮೂಡಿಸಬೇಕು ಎಂದು ಸಚಿವರು ಗತಿಳಿಸಿದ್ದಾರೆ.ಪ್ರಮುಖ ಬ್ಯಾಂಕುಗಳು ಮತ್ತು ವಿಮಾ ಕಂಪನಿಗಳೊಂದಿಗೆ ಸಭೆ ನಡೆಸಿ ಇಲಾಖೆಯ ಉದ್ಯೋಗಿಗಳಿಗೆ ಕೈಗೆಟುಕುವ ದರಗಳಲ್ಲಿ ಅತ್ಯುತ್ತಮ ವಿಮಾ ಯೋಜನೆಗಳನ್ನು ನೀಡಲು ಕ್ರಮ ಕೈಗೊಳ್ಳಬೇಕು ಎಂದು ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳಿಗೆ ಸೂಚಿಸಿದ್ದಾರೆ. ನೌಕರರ ಕುಟುಂಬಗಳಿಗೆ ಸಮಗ್ರ ಆರ್ಥಿಕ ಭದ್ರತೆಯನ್ನು ಒದಗಿಸುವುದು ಇದರ ಉದ್ದೇಶವಾಗಿದೆ. ಇಲಾಖೆಯಲ್ಲಿ ಕೆಲಸ ಮಾಡುವ ಗುತ್ತಿಗೆ ನೌಕರ–ರಿಗೆ ಅವಧಿ ವಿಮಾ ಪ್ರಯೋಜನಗಳನ್ನು ವಿಸ್ತರಿಸುವ ಕಾರ್ಯಸಾಧ್ಯತೆಯನ್ನು ಪರಿಶೀಲಿಸುವಂತೆ ಹಿರಿಯ ಅಧಿಕಾರಿಗಳಿಗೆ ಡಾ. ಶರಣಪ್ರಕಾಶ್ ಪಾಟೀಲ್ ಆದೇಶಿಸಿದ್ದಾರೆ.

## ಸಾಹಿತ್ಯ ಸಿಂಚನ

"ಗೆಲುವಿನ ಹೆಜ್ಜೆ ತುಳಿದು ಬಾಳಬೇಕು ಬದುಕಿನ ಬೊಗಸೆಯಲಿ"

ಗೆಲುವು ಕಷ್ಟದ ಮಾತಲ್ಲ
ಶ್ರದ್ಧೆ, ನಿಷ್ಠೆಯಿಂದ ವಶವಾಗುವುದೆಲ್ಲ
ಸಾಧನೆಯಿಲ್ಲದ ಜೀವನ ವ್ಯರ್ಥ
ಸತತ ಪರಿಶ್ರಮವೇ ಗೆಲುವಿನ ಒಳ ಅರ್ಥ!!

ಗೆಲುವಿನ ಹೆಜ್ಜೆ ತುಳಿದು ಬಾಳಬೇಕು
ನಮ್ಮ ಈ ಬದುಕಿನ ಬೊಗಸೆಯಲಿ
ದ್ವೇಷ, ಅಸೂಯೆ ಬಿಟ್ಟು ಸಾಗಬೇಕು
ಬದುಕಿನ ಮೂರು ದಿನದ ಸಂತೆಯಲಿ!!

ಮೋಸ,ವಂಚನೆಗೆ ಕಾಲಗರ್ಭದಲ್ಲಿ
ದುಪ್ಪಟ್ಟು ಶಿಕ್ಷೆ ಅನುಭವಿಸಬೇಕು
ಮರೆಯದಿರು ಮಾನವ ನಿಷ್ಠೆಯಿರಲಿ
ಪ್ರೀತಿಸಿದ ಜೀವಗಳ ಜೊತೆ ನಗುತ್ತಾ ಇರಬೇಕು!!

ಕನಸಿನ ಊರು ನೀನು ತಲುಪಬೇಕು
ಹೆಜ್ಜೆ ಹೆಜ್ಜೆಗು ಗೆಲುವು ಸಾಧಿಸಬೇಕು
ಅಲ್ಪ ತಿಳಿದು ಜ್ಞಾನಿಯಂತೆ ಬೀಗಬೇಡ
ಅಹಂಕಾರ ತ್ಯಜಿಸಿ ನಿನ್ನೊಳಗೆ ನೀ ತಿಳಿದು ನೋಡಾ!!

ಶ್ರೀಮತಿ ಕವಿತಾ ಹಿರೇಮಠ
ಕವಿತಾಳ

# ಅಂಬಾಮಠ ಅಂಬಾದೇವಿ ಜಾತ್ರೆಯಲ್ಲಿ ಸನ್ ರೈಸ್ ಗ್ರೂಪ್ ಆಫ್ ಇನ್ಸ್ಟಿಟ್ಯೂಷನ್ ವಿದ್ಯಾರ್ಥಿಗಳ ಆರೋಗ್ಯ ಸೇವೆ

ನೈಜ್ಯ ದೆಸೆ ನ್ಯೂಸ್



ಸಿಂಧನೂರು : ಜ 4 ಅಂಬಾಮಠದಲ್ಲಿ ನಡೆಯುತ್ತಿರುವ ಅಂಬಾದೇವಿಯ ಜಾತ್ರಾ ಮಹೋತ್ಸವದಲ್ಲಿ ಸನ್ ರೈಸ್ ಗ್ರೂಪ್ ಆಫ್ ಇನ್ಸ್ಟಿಟ್ಯೂಷನ್ ವಿದ್ಯಾರ್ಥಿಗಳು ದಿನಾಂಕ 2.01.2026 ರಿಂದ ಆರೋಗ್ಯ ಇಲಾಖೆಯವರ ಜೊತೆ ಸೇರಿ ಆರೋಗ್ಯ ಸೇವೆಯನ್ನ ನೀಡುತ್ತಾ ಬರುತ್ತಿದ್ದಾರೆ ಜಾತ್ರೆಗೆ ಈಆಗಮಿಸಿರುವ ಯಾತ್ರಿಕರಿಗೆ ಯಾವುದೇ ತೊಂದರೆಗಳು ಆಗಬಾರದೆಂದು ತಾಲೂಕಾ ಆಡಳಿತ ಸಿಂಧನೂರು ಮತ್ತು ಅಂಬಾದೇವಿ ದೇವಸ್ಥಾನದ ಆಡಳಿತ ಮಂಡಳಿ ಜಾತ್ರಾ ಪ್ರದೇಶದಲ್ಲಿ ನಿರ್ಮಿಸಿರುವ ಹೆಲ್ತ್ ಕಿಂ-ಯಾಸ್ಕ್ ಗಳಲ್ಲಿ ನಿರಂತರವಾಗಿ ಸೇವೆಯನ್ನು ಸಲ್ಲಿಸುತ್ತಾ ಇದ್ದಾರೆ ಅದರ ಜೊತೆ ಜೊತೆಗೆ ಜಾತ್ರೆಗೆ ಆಗಮಿಸಿರುವ ಭಕ್ತಾದಿಗಳಿಗೆ ಆರೋಗ್ಯ ಶಿಕ್ಷಣ ನೀಡುವ ಕೆಲಸವನ್ನು ಸಹ ಮಾಡುತ್ತಿದ್ದಾರೆ ಇದೇ ಸಂದರ್ಭದಲ್ಲಿ ಜಾತ್ರೆಗೆ ನಿಯೋಜನೆಗೊಂಡಿರುವ ಆರಕ್ಷಕರಿಗೆ ಸಿ ಪಿ ಆರ್ ಪ್ರಥಮ ಚಿಕಿತ್ಸೆ ಬಗ್ಗೆ ಪ್ರದರ್ಶನಗಳನ್ನು ಮಾಡಿ ತೋ-ರಿಸುವ ಮುಖಾಂತರ ಅರಿವು ಮೂಡಿಸುವ ಕೆಲಸವನ್ನು ಮಾಡುತ್ತಿದ್ದಾರೆ ನಿರಂತರವಾಗಿ ಜಾತ್ರೆಯಲ್ಲಿ 60ಕ್ಕೂ ಹೆಚ್ಚು ವಿದ್ಯಾರ್ಥಿಗಳು ದಿನಾಂಕ 2 ರಿಂದ ಇಲ್ಲಿವರೆಗೆ ಸಾರ್ವಜನಿಕ ಹಿತಾದೃಷ್ಟಿಯಿಂದ ಜಾತ್ರೆಯಲ್ಲಿ ಹಾಕಲಾಗಿರುವ ಅಂಗಡಿ ಮಳಿಗೆಗಳಿಗೆ ತೆರಳಿ ಶುದ್ಧ ಕುಡಿಯುವ ನೀರು ಹಾಗೂ ಆಹಾರ ಸುರಕ್ಷತೆ ಸ್ವಚ್ಛತೆಯ ಬಗ್ಗೆ ಅರಿವು ಮೂಡಿಸುವ ತಮ್ಮ ಅಮೂಲ್ಯ ಸೇವೆಯನ್ನು ನೀಡುತ್ತಿದ್ದಾರೆ ಸನ್ ರೈಸ್ ಗ್ರೂಪ್ ಆಫ್ ಇನ್ಸ್ಟಿಟ್ಯೂಷನ್ ನ ಅಧ್ಯಕರಾದ ಇರ್ಫಾನ್ ಕೆ ಅತ್ತಾರ್ ಮಾರ್ಗದರ್ಶನದಲ್ಲಿ ಹಾಗೂ ಪ್ರಾಚಾರ್ಯ ಲಾಜರ್ ಸಿರಿಲ್ ನೇತೃತ್ವದಲ್ಲಿ ಎಲ್ಲಾ ಉಪನ್ಯಾಸಕರು ಮತ್ತು ಜನಜಾಗೃತಿ ಮತ್ತು ಆರೋಗ್ಯ ಜಾಗೃತಿ ಮೂಡಿಸುವ ಮುಖಾಂತರ ಅಂಬಾದೇವಿಯ ಸೇವೆ ಮಾಡುತ್ತಿದ್ದಾರೆ, ವಿದ್ಯಾರ್ಥಿಗಳ ಈ ಕೆಲಸಕ್ಕೆ ಮಾನ್ಯ ಶಾಸಕರಾದ ಹಂಪನಗೌಡ ಬಾದರ್ಲಿ ತಾಲೂಕ ಆಡಳಿತ ಸಿಂಧನೂರು ಹಾಗೂ ತಾಲೂಕಾ ಆರೋಗ್ಯ ಅಧಿಕಾ-ರಿಗಳ ಕಚೇರಿಯಿಂದ ಪ್ರಶಂಸೆಯನ್ನು ವ್ಯಕ್ತಪಡಿಸಿದ್ದಾರೆ, ಇದೇ ಸಂದರ್ಭದಲ್ಲಿ ಬಸವ ನರ್ಸಿಂಗ್ ಕಾಲೇಜು ವಿದ್ಯಾರ್ಥಿಗಳು ಕರ್ತವ್ಯವನ್ನು ನಿರ್ವಹಿಸುತ್ತಿದ್ದಾರೆ ಸನ್ ರೈಸ್ ಗ್ರೂಪ್ ಆಫ್ ಇನ್ಸ್ಟಿಟ್ಯೂಷನ್ ಅಧ್ಯಕ್ಷರಾದ ಇರ್ಫಾನ್ ಕೆ ಅತ್ತಾರ್ ಅವರು ಈ ಸೇವೆಯು ಜಾತ್ರೆಯಲ್ಲಿ ನಡೆಯುವ ಕುಂಬದವರಿಗೂ ಮುಂದುವರಿಯುತ್ತದೆ ಎಂದು ಆಶ್ವಾಸನೆಯನ್ನು ನೀಡಿದ್ದಾರೆ ತಾಲೂಕ ಆರೋಗ್ಯ ಅಧಿಕಾರಿಗಳಾದಂತ ಡಾ ಅಯ್ಯನ್ ಗೌಡ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳಾದಂತಹ ಶ್ರೀಮತಿ ಗೀತಾ ಹಿರೇಮಠ್ ಅವರ ಮಾರ್ಗದರ್ಶನದಲ್ಲಿ ಎಲ್ಲಾ ಐದು ಹೆಲ್ತ್ ಡಸ್ಕುಗಳಲ್ಲಿ ಆರೋಗ್ಯ ಸೇವೆಯು ಮುಂದುವರಿಯುತ್ತಾ ಇದೆ ಇದೇ ಸಂದರ್ಭದಲ್ಲಿ ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಆಶಾ ಕಾರ್ಯಕರ್ತೆಯರು ನರ್ಸಿಂಗ್ ಕಾಲೇಜು ವಿದ್ಯಾರ್ಥಿಗಳು ತಮ್ಮ ಸೇವೆಯನ್ನು ಸಲ್ಲಿಸುತ್ತಿದ್ದಾರೆ




## ಚಿರತೆ ಹೆಜ್ಜೆ ಗುರುತು, ಆತಂಕದಲ್ಲಿ ಜನತೆ

ನೈಜ್ಯ ದೆಸೆ ನ್ಯೂಸ್

ತಾಳಿಕೋಟೆ: ತಾಲ್ಲೂಕಿನ ಹಿರೂರ ಗ್ರಾಮದ ಜಮೀನಿನಲ್ಲಿ ಚಿರತೆಯ ಹೆಜ್ಜೆಗುರುತುಗಳು ಕಂಡು ಬಂದಿದ್ದು ಡೋಣಿ ದಂಡೆಯ ಗುತ್ತಿಹಾಳ, ಬೋಳವಾಡ ಸುತ್ತಮುತ್ತಲಿನ ಗ್ರಾಮಸ್ಥರಲ್ಲಿ ಭಯದ ವಾತಾವರಣ ಮೂಡಿಸಿದೆ.ಡಿ.31 ರಂದು ಚಿರತೆ ಹೆಜ್ಜೆ ಗುರುತುಗಳ ಬಗ್ಗೆ ರೈತರು ನೀಡಿದ ಮಾಹಿತಿಯ ಮೇರೆಗೆ ಸ್ಥಳ ಪರಿಶೀಲನೆ ನಡೆಸಿದ ಅರಣ್ಯಾಧಿಕಾರಿಗಳು ಅದು ಚಿರತೆಯ ಹೆಜ್ಜೆಗುರುತು ಎಂಬುದನ್ನು ಖಚಿತಪಡಿಸಿದ್ದಾರೆ.ಡಿ. 31ರಿಂದ ಜನೆವರಿ 03 ಶನಿವಾರದವರೆಗೆ ವಿವಿಧ ಗ್ರಾಮಗಳ ಜಮೀನುಗಳಲ್ಲಿ ಚಿರತೆಯ ಚಲನವಲನದ ಬಗ್ಗೆ ಪರಿಶೀಲನೆ ನಡೆಸಿದ್ದಾಗಿ ಚಿರತೆ ಹಾಯ್ದು ಹೋಗಿರುವ ಹೆಜ್ಜೆ ಗುರುತಗಳಿವೆ. ಆದರೆ ಅಲ್ಲಿ ಇಲ್ಲಿ ಸುಳಿದಾಡುತ್ತಿರುವ ಬಗ್ಗೆ ಮಾಹಿತಿ ಲಭ್ಯವಿಲ್ಲ, ದು ಸಿಂದಗಿ ತಾಲ್ಲೂಕಿನತ್ತ ಹೋಗಿರುವ ಸಾಧ್ಯತೆಗಳಿವೆ ಎಂದರು,ಪತ್ರಿಕೆಯೊಂದಿಗೆ ಮಾತನಾಡಿದ ಮುದ್ದೇಬಿಹಾಳ ಪ್ರಾದೇಶಿಕ ಅರಣ್ಯ ವಲಯಾಧಿಕಾರಿ ಬಿ.ಐ.ಬಿರಾದಾರ, ಚಿರತೆ ಒಂದೇ ಕಡೆ ಇರುವುದಿಲ್ಲ, ಸದ್ಯ ಹೆಜ್ಜೆ ಗುರುತು ಹೋಗಿರುವ ಬಗ್ಗೆ ಮಾತ್ರ ಇವೆ. ಕಳೆದ ಮೂರುದಿನಗಳಿಂದ ನಮ್ಮ ಸಿಬ್ಬಂದಿ ಅದರ ಹೆಜ್ಜೆ ಗುರುತುಗಳ ಹುಡುಕಾದಲ್ಲಿದ್ದಾರೆ. ನಂತರ ಎಲ್ಲಿಯೂ ಪತ್ತೆಯಾಗಿಲ್ಲ, ಈ ಬಗ್ಗೆ ಆತಂಕ ಬೇಡ, ಆದರೆ ಜನತೆ ಜಾಗೃತರಾಗಿರುವಂತೆ ತಿಳಿಸಿದರು.



ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

ಸುದ್ದಿ ಹಾಗೂ ಜಾಹಿರಾತಿಗಾಗಿ ಸಂಪರ್ಕಿಸಿ
9902277588, 9880707587, 9008787586

# ಕಾವ್ಯ ಕಮ್ಮಟದಲ್ಲಿ ಸಂಖ್ಯೆ ಮುಖ್ಯವಲ್ಲ, ಗುಣಾತ್ಮಕ ಮುಖ್ಯ: ವೆಂಕಟಗಿರಿ ದಳವಾಯಿ.

ನೈಜ್ಯ ದೆಸೆ ನ್ಯೂಸ್



ಕನ್ನಡ ಸಾಹಿತ್ಯ ಪರಿಷತ್ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಕಾವ್ಯ ಕಮ್ಮಟದ ಸಂಪನ್ಮೂಲ ವ್ಯಕ್ತಿಗಳಾಗಿ ಬಂದಂತಹ ಹಂಪಿ ಕನ್ನಡ ವಿಶ್ವವಿದ್ಯಾಲಯ ವಿಮರ್ಶಕರಾದ ಡಾ.ವೆಂಕಟಗಿರಿ ದಳವಾಯಿ ಅವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.ನಗರದ ಎವಿಎಸ್ ಬ್ರಿಲಿಯಂಟ್ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಕಾವ್ಯ ಕಮ್ಮಟ ಉದ್ಘಾಟಿಸಿ ಮಾತನಾಡಿದ ಅವರು, ಕಾವ್ಯ ಕಮ್ಮಟಗಳಲ್ಲಿ ಸಂಖ್ಯೆ ಮುಖ್ಯವಲ್ಲ ಗುಣಾತ್ಮಕಥೆ ಮುಖ್ಯ, ಕವಿಗಳು ಸಾಹಿತ್ಯ ರಚನೆ ಪೂರ್ವದಲ್ಲಿ ಓದುವುದು ಮುಖ್ಯ, ಪ್ರತಿ ದಿನ ಸಾಹಿತ್ಯದ ಕುರಿತು ಚರ್ಚೆ ಅವಶ್ಯಕ, ಕವಿ ಯಾವುದಕ್ಕೆ ಮೊದಲ ಆದ-ತೆ ಕೊಡಬೇಕು ಎನ್ನುವುದು ಬಹಳ ಮುಖ್ಯ, ಕವಿಗೆ ಅನಂತಮೂರ್ತಿ ಹೇಳೀರುವ ಮೂರು ಹಸಿವಿನ ಕುರಿತು ಸಮಾನತೆಯ ಹಸಿವು, ಆಧ್ಯಾತ್ಮದ ಹಸಿವು, ಆಧುನಿಕಥೆಯ ಹಸಿವು ತಿಳಿದುಕೊಳ್ಳುವುದು ಮುಖ್ಯ, ಗುಬ್ಬರದ ಮೂಲಕ ಕಾವ್ಯ ಪ್ರವೇಶವಾಗಬೇಕು. ಹೂ ಮೂಲಕ ಅಲ್ಲ. ಜನಪದರ ಸಾಹಿತ್ಯ ನಮಗೆ ಬಹಳ ಮುಖ್ಯವಾಗಬೇಕು. ಕುವೆಂಪು ಅವರು ತಮ್ಮ ಮಗನಿಗೆ ಬರೆದ ಪತ್ರ ಕಾವ್ಯ ರಚನೆ ಬರೆದದ್ದು ನಾವು ಓದಬೇಕು. ಕಾವ್ಯ ತಲಪಬೇಕಾದದ್ದು ಯಾರಿಗೆ ಎನ್ನುವುದು ಅರಿಯಬೇಕು. ಆದ-ುನಿಕತೆಯ ಸಂದರ್ಭದಲ್ಲಿ ಬೇಂದ್ರೆ, ಕುವೆಂಪು, ಕಾರಂತ, ಕಾರ್ನಾಡ್. ಸಿದ್ದಲಿಂಗಯ್ಯ, ಕೆ.ಬಿ.ಸಿದ್ದಯ್ಯ, ಮುಳ್ಳೂರು ನಾಗರಾಜ, ಎಲ್. ಹನುಮಂತಯ್ಯ, ಎನ್.ಕೆ.ಹನುಮಂತಯ್ಯ ಕಾವ್ಯಗಳು ಹಸಿವಿನ ಬಗ್ಗೆ, ಅಸಮಾನತೆ, ಮೌಡ್ಯತೆಯ ವಿರುದ್ಧದ ಬಗ್ಗೆ ಕಾವ್ಯಗಳನ್ನು ಬೆಂಕಿಯ ಕಿಡಿಗಳಂತೆ ಹೊರ ಹಾಕಿದರು.ಹೆಣ್ಣನ್ನು ಸಮಾನತೆಯ ಸಂಕೇತವಾಗಿ ನೋಡಲಿಲ್ಲ ದಲಿತರನ್ನು ಮನುಷ್ಯರನ್ನಾಗಿ ಕಾಣಲಿಲ್ಲ. ಈ ತರದ ವ್ಯವಸ್ಥೆಯನ್ನು ಬದಲಾಯಿಸಲು ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಸಂವಿಧಾನ ಬರೆದರು. ಇದು ಮನುಕುಲದ ಒಳಿತಿಗಾಗಿ ಬರೆದ ಮಹಾನ್ ಗ್ರಂಥ-'ವಾಗಿದೆ. ಎಂದು ಹೇಳಿದರು.ಕಮ್ಮಟ ಕು-ರಿತು ಬಸವರಾಜ.ಪಿ.ನಾಯಕ ಪ್ರಸ್ಥಾವಿಕ ಮಾತಗಳನ್ನಾಡುತ್ತಾ ಕ.ಸಾ.ಪ ಇಲ್ಲಿಯವರೆಗೆ ಹಮ್ಮಿಕೊಂಡ ಕಾರ್ಯಕ್ರಮ ಮತ್ತು ಇವತ್ತಿನ ಕಾವ್ಯ ಕಮ್ಮಟದ ಕುರಿತು ತಿಳಿಸಿದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಅದ್ಯಕ್ಷರಾದ ರಂಗಣ್ಣ ಪಾಟೀಲ್ ಅಳ್ಳಂಡಿ ಆಶಯ ಮಾತುಗಳನ್ನಾಡಿದರು. ಕಾರ್ಯಕ್ರಮದಲ್ಲಿ ಎಸ್.ದೇವೇಂದ್ರಗೌಡ, ವೈ.ನರೇಂದ್ರನಾಥ. ಮೋಹನ ಹೊಸಮನಿ. ಹೇಮಂತ ಕುಮಾರ. ಡಾ.ವೆಂಕಟನಾರಾಯಣ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.ನಂತರ ನಡೆದ ಎರಡು ಗೊಷ್ಠಿಗಳ ಸಂಪನ್ಮೂಲ ವ್ಯಕ್ತಿಗಳಾದ ಡಾ.ವೆಂಕಟಗಿರಿ ದಳವಾಯಿ ಆಧುನಿಕ ಕನ್ನಡ ಕಾವ್ಯ ಪರಂಪರೆ ಕುರಿತು. ಡಾ.ಜಾಜಿ ದೇವೇಂದ್ರಪ್ಪ ಅನುವಾದ ಕಾವ್ಯ ಆಶಯ ಮತ್ತು ಅಭಿವ್ಯಕ್ತಿ ಕುರಿತು ವಿಷಯ ಮಂಡಿಸಿದರು. ಪ್ರತಿಕ್ರಿಯೆ ಅಯ್ಯಪ್ಪ ಮೇಟಿ, ಹುಸೇನಪ್ಪ ಅಮರಾಪುರ, ಡಾ.ಶರೀಫ್ ಹಸಮಕಲ್. ರಾಮಣ್ಣ ಹಿರೇಬೇರ್ಗಿ, ಶರಣಪ್ಪ ಹೊಸಳ್ಳಿ ವ್ಯಕ್ತಪಡಿಸಿದರು. ಅಧ್ಯಕ್ಷತೆಯನ್ನು ಮೊದಲಗೊಷ್ಠಿಗೆ ಡಾ.ಕೆ.ಖಾದರಬಾಷಾ, ಎರಡನೇ ಗೊಷ್ಠಿಗೆ ರಮಾದೇವಿ ಶಂಭೋಜಿ ವಹಿಸಿ ಮತನಾಡಿದರು. ಕಾರ್ಯಕ್ರಮದಲ್ಲಿ ಎಸ್.ಶರಣೇಗೌಡ, ವಿದ್ಯಾವತಿ, ಎನ್. ರಾಮನಗೌಡ ಉಪಸ್ಥಿತರಿದ್ದರು.



# ಪತ್ರಿಕೆಗಳಲ್ಲಿನ ವರದಿಗಳು ಸಮಾಜದ ಕನ್ನಡಿಯಂತಿರಬೇಕು: ಆಯುಕ್ತ ಬಿ.ವೆಂಕಟಸಿಂಗ್



ನೈಜ್ಯ ದೆಸೆ ನ್ಯೂಸ್

ಪತ್ರಿಕೋದ್ಯಮ ಪವಿತ್ರ ಮತ್ತು ಗೌರವದ ವೃತ್ತಿಯಾಗಿದೆ. ಸಿಂಧನೂರು: ಸಿಂಧನೂರು ನಗರದ ಕಾರ್ಯನಿರತ ಪತ್ರಕರ್ತರ ಸಂಘದ ನೂತನ ಪದಾಧಿಕಾ-ರಿಗಳ ಪದಗ್ರಹಣ ಸಮಾರಂಭ ಉದ್ಘಾಟಿಸಿ ಮಾತನಾಡಿದ ಕಲಬುರಗಿ ಪೀಠದ ಕರ್ನಾಟಕ ಮಾಹಿತಿ ಆಯೋಗದ ರಾಜ್ಯ ಮಾಹಿತಿ ಆಯುಕ್ತರಾದ ಬಿ.ವೆಂಕಟಸಿಂಗ್ ಪತ್ರಿಕೋದ್ಯಮ ಪವಿತ್ರ ಮತ್ತು ಗೌರವದ ವೃತ್ತಿಯಾಗಿದೆ. ಪತ್ರಿಕೆಗಳಲ್ಲಿನ ವರದಿಗಳು ಸಮಾಜದ ಕನ್ನಡಿಯಂತಿರಬೇಕು. ಯಾವುದೇ ಆಮಿಷ ಅಥವಾ ಒತ್ತಡಕ್ಕೆ ಒಳಗಾಗದೆ ನಿಷ್ಟುರ ಮತ್ತು ನಿಖರವಾಗಿ ಕಾರ್ಯನಿರ್ವಹಿಸಬೇಕು. ಎಂದು ಅಭಿಪ್ರಾಯಪಟ್ಟರು. ಸ್ಥಳೀಯ ರಾಜಮಹಲ್ ಫಂಕ್ಷನ್ ಹಾಲ್ ನಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲ್ಲೂಕು ಘಟಕದಿಂದ ಭಾನುವಾರ ಹಮ್ಮಿಕೊಂಡಿದ್ದ ನೂತನ ಪದಾಧಿಕಾ-ರಿಗಳ ಪದಗ್ರಹಣ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಪತ್ರಕರ್ತರು ಕಾರ್ಮಿಕರಾಗಿದ್ದು, ಕಾರ್ಮಿಕ ಇಲಾಖೆಯಿಂದ ದೊರೆಯುವ ಎಲ್ಲ ಸೌಲಭ್ಯಗಳು ಸಿಗಬೇಕಿದೆ. ನಿವೃತ್ತಿ ಹೊಂದಿದ ಪತ್ರಕರ್ತರಿಗೆ 3 ಸಾವಿರವಿದ್ದ ಮಾಶಾಸನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, 2014 ರಲ್ಲಿ ರೂ.6 ಸಾವಿರ, 2018 ರಲ್ಲಿ ರೂ.10 ಸಾವಿರ, ಪ್ರಸ್ತುತ ರೂ.13 ಸಾವಿರಕ್ಕೆ ಹೆಚ್ಚಿಸಿದ್ದಾರೆ. ಸರ್ಕಾರದ ಕಾಮಗಾರಿಗಳ ಕುರಿತು ಮಾಹಿತಿ ಕೇಳುವ ಹಕ್ಕು ಮತ್ತು ಅಸ್ತ್ರವೇ ಮಾಹಿತಿ ಹಕ್ಕು ಕಾಯ್ದೆಯಾಗಿದೆ. ವಿನಾ ಕಾರಣ ಕಿರುಕುಳ, ಬ್ಲಾಕ್‌ಮೇಲ್ ಮಾಡುವ ಅರ್ಜಿದಾರರ ಅರ್ಜಿಗಳನ್ನು ನಿರ್ಬಂಧಿಸುವ ಹಕ್ಕು ಆಯುಕ್ತ-ರಿಗೆ ಇರುತ್ತದೆ ಎಂದು ತಿಳಿಸಿದರು. ಹಿರಿಯ ಪತ್ರಕರ್ತರ ಡಿ.ಎಚ್.ಕಂಬಳಿ ಮಾತನಾಡಿ ರಾಜಕಾರಣಿಗಳಿಂದ ಪಾಠ ಹೇಳಿಸಿಕೊಳ್ಳುವ ಮಟ್ಟಿಗೆ ಇಳಿಯದೆ, ಪತಕರ್ತರು ವೃತ್ತಿ ನಿಷ್ಠೆ, ಬದ್ಧತೆಯಿಂದ ತಮ್ಮ ಮಿತಿಯಲ್ಲಿ ಕೆಲಸ ಮಾಡಬೇಕು. ವೃತ್ತಿ ಗೌರವ ಮತ್ತು ಸ್ವಾಭಿಮಾನಕ್ಕೆ ಧಕ್ಕೆಯಾಗದಂತೆ ಪ್ರತಿಯೊಬ್ಬ ಪತ್ರಕರ್ತರು ನೋಡಿಕೊಳ್ಳಬೇಕೆಂದರು. ಜೆಡಿಎಸ್ ತಾಲ್ಲೂಕು ಘಟಕದ ಅಧ್ಯಕ್ಷ ಬಸವರಾಜ ನಾಡಗೌಡ ಮಾತನಾಡಿ, ಪತ್ರಕರ್ತರು ತನಿಖಾ ವರದಿಗಳನ್ನು ಮಾಡುವ ಮೂಲಕ ಸತ್ಯಾಂಶವನ್ನು ಹೊರತರುವ ಕೆಲಸದಲ್ಲಿ ನಿರತರಾಗಬೇಕು ಎಂದು ಹೇಳಿದರು. ಆರ್‌ಡಿಸಿಸಿ ಬ್ಯಾಂಕ್ ನಿರ್ದೇಶಕ ಸೋಮನಗೌಡ ಬಾದರ್ಲಿ ಮಾತನಾಡಿ, ಪತ್ರಕರ್ತರ ಸಮಸ್ಯೆ ಇದ್ದರೆ ತಿಳಿಸಿ ವಿಧಾನ ಪರಿಷತ್ ಸದಸ್ಯರ ಮೂಲಕ ಸರ್ಕಾರದ ಗಮನ ಸೆಳೆಯುವ ಪ್ರಯತ್ನವನ್ನು ಮಾಡಿಸಲಾಗುವುದು ಎಂದು ತಿಳಿಸಿದರು. ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಸಿದ್ದಯ್ಯಸ್ವಾಮಿ ಕುಕನೂರು ಮಾತನಾಡಿ, ಪತ್ರಕರ್ತರಿಗೆ ರಾಜ್ಯ ಸರ್ಕಾರದಿಂದ ಕೊಡಮಾಡುವ ಬಸ್‌ಪಾಸ್ ನಿಯಮಗಳನ್ನು ಸಡಿಲಗೊಳಿಸಬೇಕು. ಆರೋಗ್ಯ ಸಂಜೀವಿನ ಯೋಜನೆಯನ್ನು ಎಲ್ಲ ಪತ್ರಕರ್ತರಿಗೆ ಅನ್ವಯ ಆಗುವಂತೆ ಜಾರಿಗೊಳಿಸಬೇಕು ಎಂದು ಮುಖ್ಯಮಂತ್ರಿಗಳ ಮೇಲೆ ಒತ್ತಡ ಹಾಕಲಾಗಿದೆ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಸಿದ್ದಯ್ಯಸ್ವಾಮಿ ಕುಕನೂರು ತಾಲ್ಲೂಕು ಘಟಕದ ಅಧ್ಯಕ್ಷ ಶರಣಪ್ಪ ಗೋನಾಳ ಸೇರಿ ಎಲ್ಲ ಪದಾಧಿಕಾರಿಗಳಿಗೆ ಪ್ರತಿಜ್ಞಾವಿಧಿ ಬೋಧಿಸುವ ಮೂಲಕ ಪದಗ್ರಹಣ ನೆರವೇ-ರಿಸಿದರು. ಜಿಲ್ಲಾ ಘಟಕದ ಉಪಾಧ್ಯಕ್ಷ ಅಶೋಕ ಬೆನ್ನೂರು ಸಂವಿಧಾನ ಪೀಠಿ-ಕೆಯನ್ನು ಬೋಧಿಸಿದರು. ನಂತರ ಕಲಬುರಗಿ ಪೀಠದ ಕರ್ನಾಟಕ ಮಾಹಿತಿ ಆಯೋಗದ ರಾಜ್ಯ ಮಾಹಿತಿ ಆಯುಕ್ತ ಬಿ.ವೆಂಕಟಸಿಂಗ್, ವಾಣಿಜೋದ್ಯಮಿ ರಾಜೇಶ ಹಿರೇಮಠ, ಗೊಡಿತಿ ನಾಗೇಶ್ವರನಾಥ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ಬಿ.ಕೆ.ವಿಶ್ವನಾಥ ಚೌದರಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಅಧ್ಯಕ್ಷತೆ ವಹಿಸಿದ್ದ ತಾಲ್ಲೂಕು ಘಟಕದ ಅಧ್ಯಕ್ಷ ಶರಣಪ್ಪ ಕೆ.ಗೋನಾಳ, ಕಾಂಗ್ರೆಸ್ ಯುವ ಮುಖಂಡ ಬಸನಗೌಡ ಬಾದರ್ಲಿ ವಕೀಲ ಮಾತನಾಡಿದರು. ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರಾದ ಚಂದ್ರಶೇಖರ ಯರದಿಹಾಳ, ಮಹ್ಮದ್ ಮುಸ್ತಫಾ ಉಪಸ್ಥಿತರಿದ್ದರು. ಪತ್ರಕರ್ತ ವೀರೇಶ ಗಡ್ಡಿಮಾಳ ಪ್ರಾರ್ಥಿಸಿದರು. ಸುಷ್ಮಾ ಹಿರೇಮಠ ಭಾವಗೀತೆ ಹಾಡಿದರು. ಹಿರಿಯ ಪತ್ರಕರ್ತ ಪ್ರಹ್ಲಾದ್ ಗುಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಖಜಾಂಚಿ ಚಂದ್ರಶೇಖರ ಬೆನ್ನೂರು ಸ್ವಾಗತಿಸಿದರು. ಪ್ರಧಾನ ಕಾರ್ಯದರ್ಶಿ ಅಮರೇಶ ಅಲಬನೂರು ನಿರೂಪಿಸಿದರು.ಸ್ವಾಗತಿಸಿದರು. ಪ್ರಧಾನ ಕಾರ್ಯದರ್ಶಿ ಅಮರೇಶ ಅಲಬನೂರು ನಿರೂಪಿಸಿದರು.

# ಉಪಾಹಾರತ್ಯಜಿಸಿ ಮಠಕ್ಕೆ ಧಾನ್ಯ ಸಮರ್ಪಣೆ ಮಾಡಿದ ಕೈದಿಗಳು

ನೈಜ್ಯ ದೆಸೆ ನ್ಯೂಸ್




ಕೊಪ್ಪಳ : ಜ 4 ಗವಿಮಠದ ಜಾತ್ರೆಯ ಮಹಾದಾಸೋಹಕ್ಕೆ ಬಡವರು, ಶ್ರೀಮಂತರು, ರೈತರು, ಕೂಲಿ ಕಾರ್ಮಿಕರು ಹೀಗೆ ಎಲ್ಲ ವರ್ಗದ ಜನರೂ ತಮ್ಮ ಕೈಲಾದಷ್ಟು ಧನ, ಧಾನ್ಯ, ಕಟ್ಟಿಗೆ, ತರಕಾರಿ ಅರ್ಪಣೆ ಮಾಡುತ್ತಿದ್ದಾರೆ. ಇಲ್ಲಿನ ಜಿಲ್ಲಾ ಕಾರಾಗೃಹದಲ್ಲಿರುವ ವಿಚಾರಣಾ ಕೈದಿಗಳು ಕೂಡ ಸ್ವಯಂಪ್ರೇ-ರಿತವಾಗಿ ಒಪ್ಪೊತ್ತಿನ ಉಪಾಹಾರ ತ್ಯಾಗ ಮಾಡಿ ಜಾತ್ರೆಗೆ ದವಸ, ಧಾನ್ಯ ನೀಡಿದ್ದಾರೆ.ಅಕ್ಟೋಬರ್‌ನಲ್ಲಿ ಅಭಿನವ ಗವಿಸಿದ್ಧೇಶ್ವರ ಸ್ವಾಮೀಜಿ ಜಿಲ್ಲಾ ಕಾರಾಗೃಹಕ್ಕೆ ಭೇಟಿ ನೀಡಿ ವಿಚಾರಣಾಧೀನ ಕೈದಿಗಳ ಮನಪರಿವರ್ತನೆ ವಿಚಾರವಾಗಿ ಮಾತನಾಡಿ ಸಾಂತ್ವನ ಹೇಳಿದ್ದರು. ಸ್ವಾಮೀಜಿಯ ಮಾತುಗಳಿಂದ ಪ್ರೇರಿತರಾಗಿದ್ದ ಅವರು ಮನಪರಿವರ್ತನೆ ಹೊಂದಿ ನಾವು ಕೂಡ ಮಠಕ್ಕೆ ಸಾಧ್ಯವಾದಷ್ಟು ಏನನ್ನಾದರೂ ನೀಡಬೇಕೆಂದು ಪರಸ್ಪರ ಚರ್ಚಿಸಿ ಅಕ್ಕಿ ಮತ್ತು ಗೋಧಿ ಹಿಟ್ಟನ್ನು ನೀಡುವ ತೀರ್ಮಾನ ಮಾಡಿದ್ದಾರೆ. ಜಿಲ್ಲಾ ಕಾರಾಗೃಹದಲ್ಲಿ ಅಕ್ಕಿ ಮತ್ತು ಗೋಧಿ ಹಿಟ್ಟಿಗೆ ಪೂಜೆ ಸಲ್ಲಿಸಿ ನಂತರ ಕಾರಾಗೃಹದ ಅಧೀಕ್ಷಕರು ಹಾಗೂ ಸಿಬ್ಬಂದಿಗೆ ಸಲ್ಲಿಕೆ ಮಾಡಿದ್ದು, ಇದನ್ನು ಗವಿಮಠಕ್ಕೆ ಕಿರುಕಾಣಿಕೆಯಾಗಿ ಸಮರ್ಪಣೆ ಮಾಡುವಂತೆ ಕೋರಿಕೊಂಡಿದ್ದಾರೆ. ಇದಕ್ಕಾಗಿ ಅವರು ತಮ್ಮ ಬೆಳಗಿನ ಉಪಾಹಾರ ತ್ಯಾಗ ಮಾಡಿ ಅದನ್ನು ಮಠಕ್ಕೆ ಅರ್ಪಿಸಿದ್ದಾರೆ ಎನ್ನುವುದು ವಿಶೇಷ. ಕಾರಾಗೃಹದ ಜೈಲರ್ ರಾಮುಲು, ಸಹಾಯಕ ಜೈಲರ್ ಎಫ್.ಜಿ.ಬಾರೀಕೆರ್, ಸಿಬ್ಬಂದಿ ಎ.ಕೆ.ಹಾವೋಜಿ, ಎಸ್.ಆರ್. ರಾಠೋಡ, ಬಸವರಾಜ, ಸತೀಶ್ , ರಮೇಶ, ಉಮೇಶ್, ಶಿರಿನಾಬಾನು, ಶ್ರೀದೇವಿ ಜ್ಯೋತಿ, ಶ್ವೇತಾ, ನಿರ್ಮಲಾ, ನೇತ್ರಾವತಿ ಸೇರಿದಂತೆ ಅನೇಕರು ಇದ್ದರು. ಹರಿದು ಬರುತ್ತಿದೆ ಧಾನ್ಯ: ಜಾತ್ರೆಯ ಮಹಾರಥೋತ್ಸವ ಜನವರಿ 5ರಂದು ನಡೆಯಲಿದ್ದು, ಮೇಘಾಲಯದ ರಾಜ್ಯಪಾಲರಾದ ಸಿ.ಎಚ್. ವಿಜಯಶಂಕರ ಅವರು ಉದ್ಘಾಟನೆ ನೆರವೇರಿಸುವರು. ಇದಕ್ಕೂ ಪೂರ್ವದಲ್ಲಿ ಮಠಕ್ಕೆ ಭಕ್ತ-ರಿಂದ ಅಪಾರ ಪ್ರಮಾಣದಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಶೇಂಗಾ ಹೋಳಿಗೆ, ಮಾದಲಿ, ಜೋಳದ ರೊಟ್ಟಿಗಳು ಬರುತ್ತಿವೆ. ಭಕ್ತರು ಜಿಲ್ಲೆ ಹಾಗೂ ಹೊರಜಿಲ್ಲೆಗಳಿಂದ ಚಕ್ಕಡಿ ಹಾಗೂ ಟ್ರ್ಯಾಕ್ಟರ್‌ಗಳಲ್ಲಿ ಮೆರವಣಿಗೆ ಮೂಲಕ ಬಂದು ತಂದುಕೊಡುತ್ತಿದ್ದಾರೆ. ಅಂಬರೀಷ್ ಎಸ್. ಪೂಜಾರಿ ಅಧೀಕ್ಷಕರು ಜಿಲ್ಲಾ ಕಾರಾಗೃಹಜಿಲ್ಲಾ ಕಾರಾಗೃಹದ ವಿಚಾರಣಾಧೀನ ಕೈದಿಗಳು ಸ್ವ ಇಚ್ಛೆಯಿಂದ ಉಪಹಾರ ಮಾಡದೆ ಉಪಹಾರಕ್ಕಾಗಿ ಬಳಸುತ್ತಿದ್ದ ಅಕ್ಕಿಯನ್ನು ಉಳಿಸಿ ಮಠಕ್ಕೆ ದೇಣಿಗೆ ನೀಡಿದ್ದಾರೆ. ಅವರು ಮಾಡಿದ ಅಳಿಲು ಸೇವೆ ಮನಪರಿವರ್ತನೆ ಹೊಂದಿದ್ದಕ್ಕೆ ಸಾಕ್ಷಿಯಂತಿದೆ.ಲಘು ರಥೋತ್ಸವ ಇಂದು ಗವಿಮಠದ ಆವರಣದಲ್ಲಿ ಭಾನುವಾರ ಸಂಜೆ 5.30ಕ್ಕೆ ಉಚ್ಛಾಯಿ (ಲಘು ರಥೋತ್ಸವ) ನಡೆಯಲಿದೆ. ಮಹಾರಥೋತ್ಸವದ ಹಿಂದಿನ ದಿನ ಲಘು ರಥವನ್ನು ಎಳೆಯುವುದು ಸಂಪ್ರದಾಯ. ರಥೋತ್ಸವಕ್ಕೆ ಪೂಜೆ ಸಲ್ಲಿಸಿದ ನಂತರ ವಿಜೃಂಭಣೆಯಿಂದ ಆಕರ್ಷಕ ನಂದಿಕೋಲು ಪಂಜು ಇಲಾಲುಗಳು ವಾದ್ಯಗಳು ಲಘು ರಥೋತ್ಸವಕ್ಕೆ ಮೆರಗು ತಂದು ಕೊಡುತ್ತವೆ. ಮಹಾರಥ-'ೋತ್ಸವು ಸಾಂಗತ್ಯವಾಗಿ ಜರುಗಲಿ ಎನ್ನುವ ಕಾರಣಕ್ಕೆ ಇದನ್ನು ಆಚ-'ರಣೆ ಮಾಡಲಾಗುತ್ತದೆ. ಸಂಗೀತ ಕಾರ್ಯಕ್ರಮ: ಗವಿಸಿದ್ಧೇಶ್ವರ ಸಂಗೀತ ವಿದ್ಯಾಪೀಠದ ವಿದ್ಯಾರ್ಥಿಗಳು ಹಾಗೂ ಇತರ ಕಲಾವಿದರಿಂದ ಭಾನುವಾರ ಸಂಜೆ 6 ಗಂಟೆಗೆ ಕೈಲಾಸ ಮಂಟಪದಲ್ಲಿಸಂಗೀತ ಕಾರ್ಯಕ್ರಮ ನಡೆಯಲಿದೆ.

## ನೇಮಕಾತಿ ಪ್ರಕಟಣೆ

ESIC ಕರ್ನಾಟಕ ನೇಮಕಾತಿ 2026
42 ಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕ ಹುದ್ದೆಗಳಿಗೆ ವಾಕ್-ಇನ್ ಸಂದರ್ಶನ ಇಖಐಅ ಕರ್ನಾಟಕ ನೇಮಕಾತಿ 2026: 42 ಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಉದ್ಯೋಗಿಗಳ ರಾಜ್ಯ ವಿಮಾ ನಿಗಮ ಕರ್ನಾಟಕ ಜನವರಿ 2026 ರ ESIC ಕರ್ನಾಟಕದ ಅಧಿಕೃತ ಅಧಿಸೂಚನೆಯ ಮೂಲಕ ಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕಲಬುರಗಿ - ಕರ್ನಾಟಕ ಸರ್ಕಾರದಲ್ಲಿ ವೃತ್ತಿಯನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 16-ಜನವರಿ-2026 ರಂದು ವಾಕ್-ಇನ್-ಸಂದರ್ಶನಕ್ಕೆ ಹಾಜರಾಗಬಹುದು. ಅಧಿಸೂಚನೆ ಬಿಡುಗಡೆ ದಿನಾಂಕ: 01-01-2026 ವಾಕ್-ಇನ್ ದಿನಾಂಕ: 16-ಜನವರಿ-2026 ನೋಂದಣಿ ದಿನಾಂಕ: 15ನೇ ಜನವರಿ 2026 ಅಧಿಕೃತ ವೆಬ್‌ಸೈಟ್: esic.gov.in

# ಕ್ರೀಡೋತ್ಸವದ ಮೊದಲ ಪಂದ್ಯಕ್ಕೆ ಸಚಿವರಿಂದ ಚಾಲನೆ ಜಿಲ್ಲೆಯ ಜನತೆಯ ಅಪೇಕ್ಷೆಯಂತೆ ರಾಯಚೂರು ಉತ್ಸವ ನಡೆಸುತ್ತಿದ್ದೇವೆ: ಡಾ.ಶರಣಪ್ರಕಾಶ





■ ನೈಜ್ಯ ದೆಸೆ ನ್ಯೂಸ್

ರಾಯಚೂರು ಜನವರಿ 04 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲೆಯ ಜನತೆಯ ಬಹುದಿನಗಳ ಬೇಡಿಕೆಯಂತೆ ನಾವು ಈ ಬಾರಿ ರಾಯಚೂರು ಉತ್ಸವ ಹಮ್ಮಿಕೊಂಡಿದ್ದೇವೆ. ಜಿಲ್ಲೆಯ ಪ್ರತಿಯೊಂದು ಸಂಘ-ಸಂಸ್ಥೆಗಳು, ಎಲ್ಲ ಶಾಲಾ ಕಾಲೇಜುಗಳು, ಇನ್ನಿತರ ಎಲ್ಲರೂ ಈ ಉತ್ಸವದಲ್ಲಿ ಸಕ್ರಿಯ ಭಾಗಿಯಾಗಿ ಉತ್ಸವ ಯಶಗೊಳಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಕೋರಿದರು.ರಾಯಚೂರು ಉತ್ಸವದ ಪ್ರಚಾರಾರ್ಥ ಜನವರಿ 4ರಂದು ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಂಡಿದ್ದ ಕ್ರೀಡೋತ್ಸವಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.ಸಚಿವರಾದ ಎನ್ ಎಸ್ ಬೋಸರಾಜು ಅವರು ಮಾತನಾಡಿ, ಬಹಳ ವರ್ಷಗಳ ನಂತರ ನಾವು ರಾಯಚೂರು ಜನತೆಗೆ ರಾಯಚೂರು ಉತ್ಸವದ ಕೊಡುಗೆ ನೀಡುತ್ತಿದ್ದೇವೆ. ಪತ್ರಿಕೆಗಳು ಸಹ ವಿಶೇಷ ವರದಿ ಪ್ರಕಟಿಸಿ ಉತ್ಸವ ಆಗಬೇಕು ಎಂದು ಒತ್ತಾಯ ಮಾಡಿವೆ. ವಿದ್ಯುನ್ಮಾನ ಮಾಧ್ಯಮದವರು ಉತ್ಸವ ಮಾಡಿ ಎಂದು ಸಲಹೆ ಮಾಡುತ್ತಿದ್ದರು. ಈ ಹಿನ್ನೆಲೆಯಲ್ಲಿ ಜನತೆಯ ಬೇಡಿಕೆಯನುಸಾರ ಉತ್ಸವ ನಿಗದಿ ಮಾಡಿದ್ದೇವೆ ಎಂದು ತಿಳಿಸಿದರು.ಅಧ್ಯಕ್ಷತೆ ವಹಿಸಿದ್ದ ಶಾಸಕರಾದ ಡಾ.ಎಸ್ ಶಿವರಾಜ ಪಾಟೀಲ ಮಾತನಾಡಿ, ಸಾರ್ವಜನಿಕರ ಸಹಭಾಗೀತ್ವ ಇದ್ದಾಗ ಮಾತ್ರ ಉತ್ಸವ ಯಶಗೊಳ್ಳಲು ಸಾಧ್ಯ. ಹಾಗಾಗಿ ಉತ್ಸವದ ಬಗ್ಗೆ ವಿಶೇಷ ಪ್ರಚಾರ ನಡೆಯಬೇಕು ಎಂದರು.ಉತ್ಸವ ನಿಮಿತ್ತ ಹಮ್ಮಿಕೊಂಡ ಈ ಕ್ರೀಡಾ ಉತ್ಸವದಲ್ಲಿ ಸ್ಥಳೀಯ ಕ್ರೀಡೆಗಳಿಗೆ ಆದ್ಯತೆ ನೀಡಬೇಕು ಎಂದು ಶಾಸಕರು ಸಲಹೆ ಮಾಡಿದರು.ಸಮಾರಂಭದಲ್ಲಿ ಶಾಸಕರಾದ ಹಂಪನಗೌಡ ಬಾದರ್ಲಿ, ಬಸನಗೌಡ ದದ್ದಲ್, ಎ. ವಸಂತಕುಮಾರ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾ-ರಿಗಳಾದ ಅರಣಾಂಕ್ಷು ಗಿರಿ, ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ಮುಖಂಡರಾದ ಪವನ್ ಕಿಶೋರ ಪಾಟೀಲ, ಡಾ.ರಝಾಕ್ ಉಸ್ತಾದ್, ಪಾಲಿಕೆಯ ಉಪ ಆಯುಕ್ತರಾದ ಸಂತೋಷರಾಣಿ, ತಹಸೀಲ್ದಾರರಾದ ಸುರೇಶ ವರ್ಮಾ, ಅಮರೇಶ ಬಿರಾದಾರ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಧಿಕಾರಿ ವೀರೇಶ ನಾಯಕ ಹಾಗೂ ಇತರರು ಇದ್ದರು. ಪಾಲಿಕೆಯ ಸಮಿತಿ ಕಾರ್ಯದರ್ಶಿ ಕೃಷ್ಣ ಶಾವಂತಗೇರಿ ಸ್ವಾಗತಿಸಿದರು.ಮೊದಲನೇ ಪಂದ್ಯಕ್ಕೆ ಚಾಲನೆ: ಅಧಿಕಾರಿಗಳು ಮತ್ತು ಸಿಬ್ಬಂದಿ ಒಳಗೊಂಡ ಮಹಾನಗರ ಪಾಲಿಕೆಯ ತಂಡ ಹಾಗೂ ಶಿಕ್ಷಣ ಇಲಾಖೆಯ ತಂಡದ ಮಧ್ಯೆ ಮೊದಲನೇ ಪಂದ್ಯಾರಂಭಕ್ಕೆ ಸಚಿವರು ಮತ್ತು ಶಾಸಕರು ಜನವರಿ 04ರಂದು ಚಾಲನೆ ನೀಡಿದರು. ಕ್ರೀಡೋತ್ಸವದಲ್ಲಿ ಸಚಿವರು ಮತ್ತು ಶಾಸಕರು ಕ್ರಿಕೆಟ್ ಬ್ಯಾಟ್ ಬೀಸಿ ಮತ್ತು ಬಾಲ್ ಹಾಕಿ ಪಂದ್ಯಕ್ಕೆ ಚಾಲನೆ ನೀಡಿದ್ದು ವಿಶೇಷವಾಗಿತ್ತು.

# ರಾಮಕೃಷ್ಣ ವಿವೇಕಾನಂದ ಆಶ್ರಮದಲ್ಲಿ ವಿವೇಕ ಪೂರ್ಣಿಮೆ” & “ಸಚ್ಚಿಂತನ” ಕಾರ್ಯಕ್ರಮ

■ ನೈಜ್ಯ ದೆಸೆ ನ್ಯೂಸ್




ಸಿಂಧನೂರು : ರಾಮಕೃಷ್ಣ ಆಶ್ರಮ ಸಿಂಧನೂರುನಲ್ಲಿ ಜ4 ಸಂಜೆ ಹುಣ್ಣಿಮೆಯ ಅಂಗವಾಗಿ “ವಿವೇಕ ಪೂರ್ಣಿಮೆ” ಹಾಗೂ “ಸಚ್ಚಿಂತನ” ಕಾರ್ಯಕ್ರಮವನ್ನು ಭಕ್ತಿಯಿಂದ ಆಯೋಜಿಸಲಾಯಿತು.ಕಾರ್ಯಕ್ರಮದ ಮುಖ್ಯ ಅತಿಥಿಗಳಾದ ಶ್ರೀ ರಾಜಶೇಖರ ರೆಡ್ಡಿ, ಸಾತ್ವಿಕ್ ಮೆಡಿಕಲ್ಸ್, ಸಿಂಧನೂರು ಅವರು ದೀಪ ಬೆಳಗಿಸುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ತಮ್ಮ ಭಾಷಣದಲ್ಲಿ ರಾಮಕೃಷ್ಣ ವಿವೇಕಾನಂದ ಆಶ್ರಮ ಕೈಗೊಂಡಿರುವ ಸಮಾಜಮುಖಿ ಕಾರ್ಯಗಳನ್ನು ಶ್ಲಾಘಿಸಿದರು. ಸಚ್ಚಿಂತನ ಕಾರ್ಯಕ್ರಮದ ಉಪನ್ಯಾಸಕರಾದ ಪರಮ ಪೂಜ್ಯ ಶ್ರೀ ಸ್ವಾಮಿ ನಿರ್ಭಯಾನಂದ ಸರಸ್ವತಿ ಮಹಾರಾಜ್, ಅಧ್ಯಕ್ಷರು  ರಾಮಕೃಷ್ಣ ವಿವೇಕಾನಂದ ಆಶ್ರಮ ಗದಗ-ವಿಜಯಪುರ, ಅವರು ಮನುಷ್ಯನ ಜೀವನದ ಸಾಕ್ಷಾತ್ಕಾರಕ್ಕೆ ಅಗತ್ಯವಾದ ಆತ್ಮಜಾಗೃತಿ ಮತ್ತು ಆಧ್ಯಾತ್ಮಿಕ ಚಿಂತನೆಗಳ ಕು-ರಿತು ಸುದೀರ್ಘ ಹಾಗೂ ಮನನೀಯ ಉಪನ್ಯಾಸ ನೀಡಿದರು ಮತ್ತು ಆಶೀರ್ವಚನ ನೀಡಿದರು. ಕಾರ್ಯಕ್ರಮದ ಮುಖ್ಯ ಅತಿಥಿಗಳಾದ ಶ್ರೀ ನರೇಂದ್ರನಾಥ ವೈ, ಸದಸ್ಯರು ಸಿಂಧನೂರು ನಗರಾಭಿವೃದ್ಧಿ ಪ್ರಾಧಿಕಾರ, ಅವರು ಆಶ್ರಮದ ನಿಸ್ವಾರ್ಥ ಸೇವಾ ಚಟುವಟಿಕೆಗಳ ಬಗ್ಗೆ ಶ್ಲಾಘನೀಯ ಮಾತುಗಳನ್ನಾಡಿದರು.ಈ ಸಂದರ್ಭದಲ್ಲಿ ಶ್ರೀ ಮಲ್ಲಿಕಾರ್ಜುನ ಸಾಹುಕಾರ, ನಾಮನಿರ್ದೇಶಿತ ಸದಸ್ಯರು  ನಗರಸಭೆ ಸಿಂಧನೂರು, ಹಾಗೂ ಶ್ರೀ ನಾಗರಾಜ್ ಐಗಿಳಿ, ಉದ್ಯಮಿ, ಕಾರಟಗಿ ಅವರು ಅತಿಥಿಗಳಾಗಿ ಪಾಲ್ಗೊಂಡಿದ್ದರು. ಕಾರ್ಯಕ್ರಮಕ್ಕೆ ಅಧ್ಯಕ್ಷತೆಯನ್ನು ವಹಿಸಿದ್ದ ಆಶ್ರಮದ ಅಧ್ಯಕ್ಷರಾದ ಪೂಜ್ಯ ಶ್ರೀ ಸ್ವಾಮಿ ಸದಾನಂದ ಮಹಾರಾಜ್, ಆಶ್ರಮದ ಕಾರ್ಯಗಳು ಮತ್ತು ಕಳೆದ ಐದು ವರ್ಷಗಳಿಂದ ಆಶ್ರಮ ಸಾಗುತ್ತಿರುವ

# ತರಾತುರಿಯಲ್ಲಿ ಅಂಗನವಾಡಿ ಕೇಂದ್ರ ಉದ್ಘಾಟನೆ



■ ನೈಜ್ಯ ದೆಸೆ ನ್ಯೂಸ್

ಕುಷ್ಟಗಿ : ವಿವಾದಿತ ಪ್ರದೇಶದಲ್ಲಿ ನಿರ್ಮಾಣಗೊಂಡಿದೆ ಎಂದು ಆರೋಪಿಸಲಾಗಿರುವ ತಾಲ್ಲೂಕಿನ ತಾವರಗೇರಾದ 13ನೇ ಸಂಖ್ಯೆ ಅಂಗನವಾಡಿ ಕೇಂದ್ರದ ನೂತನ ಕಟ್ಟಡವನ್ನು ಶನಿವಾರ ದಿಢೀರನೇ ಉದ್ಘಾಟನೆ ನೆರವೇರಿಸಲಾಗಿದೆ. ಸರ್ಕಾರದ ಲಕ್ಷಾಂತರ ಅನುದಾನದಲ್ಲಿ ಅಂಗನವಾಡಿ ಕೇಂದ್ರ ನಿರ್ಮಿಸಲಾಗಿದೆ. ಆದರೆ ಸಂಬಂಧಿಸಿದ ಜಾಗ ಭೂ ಪರಿವರ್ತನೆಗೊಂಡಿದ್ದರೂ ಸಂಬಂಧಿಸಿದ ಕುಟುಂಬಗಳ ಮಧ್ಯೆ ಆಸ್ತಿ ವಿವಾದ ಉಂಟಾಗಿ ನ್ಯಾಯಾಲಯದಲ್ಲಿ ದಾವೆ ಹೂಡಲಾಗಿದೆ. ಈ ಕಾರಣಕ್ಕೆ ಕೇಂದ್ರದ ಉದ್ಘಾಟನೆ ನೆರವೇರಿಸಿಲ್ಲ ಎಂದೆ ಇಲ್ಲಿಯ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಯಲ್ಲಮ್ಮ ಹಂಡಿ 'ಪ್ರಜಾವಾಣಿ'ಗೆ ಸ್ಪಷ್ಟಪಡಿಸಿದ್ದರು. ಅಷ್ಟೇ ಅಲ್ಲದೆ ಅಂಗನವಾಡಿ ಕೇಂದ್ರಕ್ಕೆ ಸಂಬಂಧಿಸಿದ ಪ್ರಕರಣ ನ್ಯಾಯಾಲಯದಲ್ಲಿರುವುದರಿಂದ ಉದ್ಘಾಟನೆ ನೆರವೇರಿಸದಂತೆ ತಾವರಗೇರಾ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಸಿಡಿಪಿಒ ಅವ-ರಿಗೆ ಪತ್ರ ಬರೆದಿದ್ದರು. ಉದ್ಘಾಟನೆ ನಡೆಸಲು ಸಾಧ್ಯವಾಗುವುದಿಲ್ಲ ಎಂದು ಹೇಳಿಕೆ ನೀಡಿದ ಬೆನ್ನಲ್ಲೇ ಸಿಡಿಪಿಒ ತಮ್ಮ ಸಿಬ್ಬಂದಿಗೆ ಕೇಂದ್ರದ ಉದ್ಘಾಟನೆಗೆ ಮೌಖಿಕ ಸೂಚನೆ ನೀಡಿದ್ದಾರೆ.ಈ ವಿಷಯಕ್ಕೆ ಸಂಬಂಧಿಸಿದಂತೆ 'ಪ್ರಜಾವಾಣಿ'ಯ ಜ.3ರ ಸಂಚಿಕೆಯಲ್ಲಿ 'ಬಾಗಿಲು ತೆರೆಯದ ಅಂಗನವಾಡಿ ಕೇಂದ್ರ' ಶೀರ್ಷಿಕೆಯಲ್ಲಿ ವಿಶೇಷ ವರದಿ ಪ್ರಕಟವಾಗಿತ್ತು. ಆದರೆ ಅದೇ ದಿನ ಬೆಳಿಗ್ಗೆ ಶಿಶು ಅಭಿವೃದ್ಧಿ ಇಲಾಖೆಯ ಮೇಲ್ವಿಚಾರಕಿ ಮತ್ತು ಸಿಬ್ಬಂದಿ ತರಾತುರಿಯಲ್ಲಿ ಪಟ್ಟಣ ಪಂಚಾಯಿತಿ ಹಾಕಿದ್ದ ಬೀಗ ಮುರಿದು ಕೇಂದ್ರದ ಉದ್ಘಾಟನೆ ಶಾಸ್ತ್ರ ನೆರವೇರಿಸಿದರು. ಉದ್ಘಾಟನೆಗೆ ಸಿಡಿಪಿಒ ತಾಕೀತು: ಈ ಕುರಿತು 'ಪ್ರಜಾವಾಣಿ'ಗೆ ವಿವ-ರಿಸಿದ ಮೇಲ್ವಿಚಾರಕಿ ಸಾವಿತ್ರಿ, ಬೆಳಿಗ್ಗೆ ದೂರವಾಣಿ ಕರೆ ಮಾಡಿದ ಸಿಡಿಪಿಒ ಅವರು ಏನೇ ಆದರೂ ಅಂಗನವಾಡಿ ಕೇಂದ್ರ ಉದ್ಘಾಟನೆ ನಡೆಸಬೇಕು ಎಂದೇ ತಾಕೀತು ಮಾಡಿದ್ದರು. ಆದರೆ ಕಟ್ಟಡ ಇರುವ ಪ್ರದೇಶದ ವಿವಾದದಲ್ಲಿರುವ ಯಾವ ಮಾಹಿತಿಯೂ ತಮಗೆ ಗೊತ್ತಾಗಿಲ್ಲ. ಮೇಲಧಿಕಾರಿ ನೀಡಿದ ಆದೇಶವ ಪಾಲಿಸಿದ್ದೇವೆ ಎಂದು ಸ್ಪಷ್ಟಪಡಿಸಿದರು.ಪ್ರಕರಣ ನ್ಯಾಯಾಲಯದಲ್ಲಿದ್ದರೂ ತರಾತುರಿಯಲ್ಲಿ ಕಟ್ಟಡ ಉದ್ಘಾಟಿಸಿರುವುದು ನ್ಯಾಯಾಂಗ ನಿಂದನೆಯಾಗಲಿದ್ದು ಅಧಿಕಾರಿಗಳ ಈ ಕ್ರಮವನ್ನು ನ್ಯಾಯಾಲಯದ ಗಮನಕ್ಕೆ ತರುವುದಾಗಿ ಚಂದ್ರಶೇಖರ ಗುರಿಕಾರ ಹೇಳಿದರು.

# ರಾಯಚೂರು ಮಹಾನಗರ ಪಾಲಿಕೆ ಖರೀದಿಸಿದ ಸ್ವಚ್ಛತಾ ವಾಹನಗಳಿಗೆ ಸಚಿವರಿಂದ ಚಾಲನೆ

■ ನೈಜ್ಯ ದೆಸೆ ನ್ಯೂಸ್







ರಾಯಚೂರು ಜನವರಿ 04 (ಕರ್ನಾಟಕ ವಾರ್ತೆ):ಇಲ್ಲಿನ ರಾಯಚೂರು ಮಹಾನಗರ ಪಾಲಿಕೆಯಿಂದ ನಗರ ಸ್ವಚ್ಛತೆಗೆ ಖರೀದಿಸಿದ ಸ್ವೀಪಿಂಗ್ ಯಂತ್ರ, ಒಳಚರಂಡಿ ನಿರ್ವಹಣೆಯ ರೆಹಿಕಲ್ ಮೌಂಟೆಡ್ ರೋಬೋಟ್ ಯಂತ್ರಕ್ಕೆ ಹಾಗೂ ಸ್ವಚ್ಛ ಭಾರತ ಮಿಷನ್ 2.0 ಅಡಿಯಲ್ಲಿ ವಿವಿಧ ಐಇಸಿ ಚಟುವಟಿಕೆಗಳಿಗೆ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು ಆಗಿರುವ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಚಾಲನೆ ನೀಡಿದರು.ನಗರದ ನೂತನ ಜಿಲ್ಲಾಧಿಕಾ-ರಿಗಳ ಕಚೇರಿಯ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ರಾಯಚರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್. ಶಿವರಾಜ ಪಾಟೀಲ್, ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ವಿಧಾನ ಪರಿಷತ್ ಶಾಸಕರಾದ ಎ.ವಸಂತಕುಮಾರ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಕ್ಷು ಗಿರಿ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ಪಾಲಿಕೆಯ ಉಪ ಆಯುಕ್ತರಾದ ಸಂತೋಷ ರಾಣಿ,

# ಕೊಪ್ಪಳದ ಶ್ರೀ ಗವಿ ಮಠಕ್ಕೆ ಬಳಗಾನೂರು ಊರಿನ ಭಕ್ತಾದಿಗಳಿಂದ 17000 ರೊಟ್ಟಿ ಸೇವೆ



■ ನೈಜ್ಯ ದೆಸೆ ನ್ಯೂಸ್



ಬಳಗಾನೂರು : 04 ಬಳಗಾನೂರು ಪಟ್ಟಣದ ಬಂದು ಶತಪುರೇಶ ದೇವಸ್ಥಾನದ ದಿಂದ ಕೊಪ್ಪಳದ ಶ್ರೀ ಗವಿ ಮಠಕ್ಕೆ ಭಕ್ತ ವೃದ ಮರಿ ಕಲ್ಯಾಣಿ ಬಳಗಾನೂರು ಊರಿನ ಭಕ್ತಾದಿಗಳು ಸೇರಿ 17000 ರೊಟ್ಟಿ 4 ಪ್ಯಾಕೆಟ್ ಹಕ್ಕಿ 4 ಬಾಕ್ಸ್ ಬೇಲ್ಲ ಕೊಪ್ಪಳದ ಶ್ರೀ ಗವಿಮಠಕ್ಕೆ ಭಕ್ತಾದಿಗಳು ತೆಗೆದುಕೊಂಡು ಹೋಗಿ ಸೇವೆ ಸಲ್ಲಿಸಿದರು. ಈ ಸಂದರ್ಭದಲ್ಲಿ ದೀಪಕ್ ಸೇಠ್, ಅಂಬ್ಲಿ ಬಸವರಾಜ್,ಸೂರ್ಯ ನರಸಿಂಹ,ಹನುಮೇಶ, ಶ್ರೀಧರ ಪತ್ತಾರ,ಬಸವರಾಜ,ವೀರಭದ್ರ ಅರಳಹಳ್ಳಿ ಹಾಗೂ ಊರಿನ ಭಕ್ತಾಧಿಗಳು ಉಪಸ್ಥಿತರಿದ್ದರು

# ರಾಯಚೂರು ಮಹಾನಗರ ಪಾಲಿಕೆಯಿಂದ ವಿಶೇಷ ಕಾರ್ಯಕ್ರಮ ರಾಯಚೂರು ಸ್ವಚ್ಛತೆಯ ಸಹಿ ಸಂಗ್ರಹ ಅಭಿಯಾನ, ಸ್ವಚ್ಛತಾ ಓಟಕ್ಕೆ ಚಾಲನೆ

■ ನೈಜ್ಯ ದೆಸೆ ನ್ಯೂಸ್

ರಾಯಚೂರು ಜನವರಿ 04 (ಕರ್ನಾಟಕ ವಾರ್ತೆ): ಇಲ್ಲಿನ ರಾಯಚೂರು ಮಹಾನಗರ ಪಾಲಿಕೆಯು ವಿಶೇಷವಾಗಿ ಆಯೋಜಿಸಿರುವ ವಿವಿಧ ಐಇಸಿ ಚಟುವಟಿಕೆಗಳ ಕಾರ್ಯಕ್ರಮಕ್ಕೆ ವೈದ್ಯಕೀಯ ಶಿಕ್ಷಣ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಚಾಲನೆ ನೀಡಿದರು.ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ರಾಯಚೂರು ಮಹಾನಗರ ಪಾಲಿಕೆಯಿಂದ ರಾಯಚೂರು ನಗರದ ಸ್ವಚ್ಛತಾ ಅಭಿಯಾನದ ಸಹಿ ಸಂಗ್ರಹ ಅಭಿಯಾನಕ್ಕೆ ಸಚಿವರು ಹಾಗೂ ಶಾಸಕರು ಸಹಿ ಮಾಡಿ ಚಾಲನೆ ನೀಡಿದರು.ರಾಯಚೂರ ನಗರ ಶುಚಿತ್ವಕ್ಕಾಗಿ ಜನವರಿ 12ರಂದು ಆಯೋಜಿಸಿರುವ ಸ್ವಚ್ಛತಾ ಓಟದ ಅಂಗವಾಗಿ ರೂಪಿಸಲಾಗಿದ್ದ ಸೆಲ್ಫಿ ಸ್ಟ್ಯಾಂಡನಲ್ಲಿ ಸಚಿವರು ಹಾಗೂ ಶಾಸಕರು ಭಾವಚಿತ್ರ ತೆಗೆಯಿಸಿಕೊಂಡರು. ಇದೆ ವೇಳೆ ವೇದಿಕೆಯ ಕಾರ್ಯಕ್ರಮ ನಡೆಯಿತು.ಸಚಿವರು ಹಾಗೂ ಶಾಸಕರು ಮತ್ತು ಅಧಿಕಾರಿಗಳು ಸ್ವಚ್ಛತಾ ಓಟ ಸಂದೇಶದ ಕ್ಯಾಪ್ ಟಿ-ಶರ್ಟ್ ಬಿಡುಗಡೆ ಮಾಡಿದರು. 2026ರ ನೂತನ ಕ್ಯಾಲೆಂಡರ್ ಗಳನ್ನು ಸಹ ಲೋಕಾರ್ಪಣೆ ಮಾಡಿದರು. ಇದೆ ವೇಳೆ ಸ್ವಚ್ಛತಾ ಓಟದ ಪೋಸ್ಟರಗಳನ್ನು ಸಹ ಬಿಡುಗಡೆ ಮಾಡಲಾಯಿತು.ಇದೇ ಸಂದರ್ಭದಲ್ಲಿ ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್. ಶಿವರಾಜ ಪಾಟೀಲ್, ಬಸನಗೌಡ ದದ್ದಲ್, ಹಂಪನಗೌಡ ಬಾದರ್ಲಿ, ಆರ್.ಬಸನಗೌಡ ತುರ್ವಿಹಾಳ, ವಿಧಾನ ಪರಿಷತ್ ಶಾಸಕರಾದ ಎ.ವಸಂತಕುಮಾರ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪೊಲೀಸ್ ವ-ರಿಷ್ಠಾಧಿಕಾರಿಗಳಾದ ಅರುಣಾಂಕ್ಷು ಗಿರಿ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ಪಾಲಿಕೆಯ ಉಪ ಆಯುಕ್ತರಾದ ಸಂತೋಷ ರಾಣಿ, ಪಾಲಿಕೆಯ ಸಮಿತಿ ಕಾರ್ಯದರ್ಶಿ ಕೃಷ್ಣ ಶಾವಂತಗೇರಿ, ಪಾಲಿಕೆಯ ವಲಯ ಆಯುಕ್ತರಾದ ಮಲ್ಲಿಕಾರ್ಜುನ ಬಿ.ಎಂ., ಪಾಲಿಕೆಯ ಅಧಿಕಾರಿ ಕೃಷ್ಣ ಕಟ್ಟಿಮನಿ ಸೇರಿದಂತೆ ಇತರರು ಇದ್ದರು.








## ಶಿಕ್ಷಣ ಮಾರ್ಗದರ್ಶಿ ವಿಶೇಷ

### M.Pharm ಫಾರ್ಮಾಸ್ಯೂಟಿಕ್ಸ್

M.Pharm ಫಾರ್ಮಾಸ್ಯೂಟಿಕ್ಸ್ ಎಂದರೆ ಫಾರ್ಮಸಿ ಪದವಿ ನಂತರ ಮಾಡುವ 2 ವರ್ಷಗಳ ಸ್ನಾತಕೋತ್ತರ ಕೋರ್ಸ್, ಇದು ಔಷಧ ತಯಾರಿಕೆ, ಗುಣಮಾದರಿ, ಮತ್ತು ಸಂಶೋದನೆಯಲ್ಲಿ ಪರಿಣತಿ ನೀಡುತ್ತದೆ; ಇದರಲ್ಲಿ ಔಷಧಗಳ ವಿಶ್ಲೇಷಣೆ, ಗುಣಮಟ್ಟದ ನಿಯಂತ್ರಣ, ಹಾಗೂ ಫಾರ್ಮಾಕೊಕಿನೆಟಿಕ್ಸ್‌ನಂತಹ ವಿಷಯಗಳು ಇರುತ್ತವೆ, ಮತ್ತು ಉತ್ತಮ ಉದ್ಯೋಗಾವಕಾಶಗಳನ್ನು ಒದಗಿಸುತ್ತದೆ. ಕೋರ್ಸ್‌ನ ವಿವರಗಳುಅವಧಿ: 2 ವರ್ಷಗಳು (4 ಸೆಮಿಸ್ಟರ್‌ಗಳು). ವಿಶೇಷತೆ Specialization):ಫಾರ್ಮಾಸ್ಯೂಟಿಕ್ಸ್ (Pharmaceutics). ಕೋರ್ಸ್‌ನ ಮುಖ್ಯ ಉದ್ದೇಶವೇನೆಂದರೆ ಔಷಧ ವಿನ್ಯಾಸ, ಅಭಿವೃದ್ಧಿ, ತಯಾರಿಕೆ ಮತ್ತು ವಿಶ್ಲೇಷಣೆಯ ಆಳವಾದ ಜ್ಞಾನ ನೀಡುವುದು. ಅರ್ಹತೆ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಃ.ಕುಚಿಡಿಟ ಪೂರ್ಣಗೊಳಿಸಿರಬೇಕು.ಸಾಮಾನ್ಯವಾಗಿ ಃ.ಕುಚಿಡಿಟ ನಲ್ಲಿ ಕನಿಷ್ಠ 50–60% ಅಂಕಗಳು ಬೇಕಾಗುತ್ತವೆ.ಉಕಂಖಿ, ಅಗಇಖಿ–ಕಉ ಅಥ–'ವಾ ಕಾಲೇಜು–ಮಟ್ಟದ ಪ್ರವೇಶ ಪರೀಕ್ಷೆಗಳ ಮೂಲಕ ಪ್ರವೇಶ. ಕೋರ್ಸ್‌ನಲ್ಲಿರುವ ಪ್ರಮುಖ ವಿಷಯಗಳು ಫಾರ್ಮಾಕೊಕಿನೆಟಿಕ್ಸ್ (ಕುಚಿಡಿಟಚೆಛಿಣಇಣಟಿಜಣುಛಿ ಫಾರ್ಮಾಸ್ಯುಟಿಕಲ್ ಮ್ಯಾನುಫ್ಯಾಕ್ಚ–ರಿಂಗ್ ಟೆಕ್ನಾಲಜಿ.ಡ್ರಗ್ ರೆಗ್ಯುಲೇಟರಿ ಅಫೇರ್ಸ್ (Drug Regulatory Affairs).ಫಾರ್ಮಾಕೊಥೆರಪ್ಯೂಟಿಕ್ಸ್ (Pharmacotherapeutics).ಕ್ಲಿನಿಕಲ್ ಫಾರ್ಮಕಾಲಜಿ (Clinical Pharmacology).ಸಂಶೋಧನೆ: ಪ್ರಬಂಧ (Thesis) ಮತ್ತು ಸಂಶೋಧನಾ ಕಾರ್ಯವನ್ನುಒಳಗೊಂಡಿರುತ್ತದೆ. ಉದ್ಯೋಗಾವಕಾಶಗಳು ಫಾರ್ಮಾಸ್ಯೂಟಿಕಲ್ ಇಂಡಸ್ಟ್ರೀಸ್ (ಔಷಧ ತಯಾರಿಕೆ ಸಂಸ್ಥೆಗಳು). ಔಷಧ ಅಭಿವೃದ್ಧಿ ಮತ್ತು ಗುಣಮಟ್ಟದ ಭರವಸೆ (Quality Assurance) ವಿಭಾಗಗಳು.ಸಂಶೋಧನಾ ಸಂಸ್ಥೆಗಳು ಮತ್ತು ಆರೋಗ್ಯ ಸೇವೆಗಳು. ಸಂಕ್ಷಿಪ್ತವಾಗಿ ಹೇಳುವುದಾದರೆ, ಒ.ಕುಚಿಡಿಟ ಫಾರ್ಮಾಸ್ಯೂಟಿ–ಕ್ಸ್ ಕೋರ್ಸ್ ಔಷಧಗಳ ಕುರಿತು ಆಳವಾದ ತಾಂತ್ರಿಕ ಮತ್ತು ಸಂಶೋಧನಾ ಜ್ಞಾನವನ್ನು ನೀಡಿ, ಭಾರತದ ಬೆಳವಣಿಗೆಯಾಗುತ್ತಿರುವ ಔಷಧೀಯ ಉದ್ಯಮದಲ್ಲಿ ಉತ್ತಮ ವೃತ್ತಿಜೀವನವನ್ನು ರೂಪಿಸಲು ಸಹಾಯ ಮಾಡುತ್ತದೆ.ಎಂ.ಫಾರ್ಮ್ ಫಾರ್ಮಾಸ್ಯುಟಿಕ್ಸ್ ಪದವೀಧರ–ರಿಗೆ ವೃತ್ತಿ ಅವಕಾಶಗಳು ಔಷಧೀಯ ಉದ್ಯಮದ ಪ್ರಮುಖ ಭಾಗವನ್ನು ಫಾರ್ಮಾಸ್ಯುಟಿಕ್ಸ್ ಒಳಗೊಂಡಿದೆ. ಭಾರತದಲ್ಲಿ ಫಾರ್ಮಾಸ್ಯುಟಿಕ್ಸ್‌ನಲ್ಲಿ ಎಂ.ಫಾರ್ಮ್‌ನ ವ್ಯಾಪ್ತಿಯು ದೊಡ್ಡದಾಗಿದೆ. ಇದು ಸಂಶೋಧನೆ ಮತ್ತು ಶೈಕ್ಷಣಿಕ ಕ್ಷೇತ್ರದಿಂದ ನಿಯಂತ್ರಕ ವ್ಯವಹಾರಗಳು ಮತ್ತು ಸಮಾಲೋಚನೆಯವರೆಗೆ ವಿಸ್ತರಿಸುತ್ತದೆ. ವಿದ್ಯಾರ್ಥಿಗಳು ಅನೇಕ ಕೆಲಸದ ಕ್ಷೇತ್ರಗಳಲ್ಲಿ ಅಗತ್ಯವಿರುವ ಜ್ಞಾನ ಮತ್ತು ಕೌಶಲ್ಯಗಳೊಂದಿಗೆ ಸಜ್ಜುಗೊಂಡಿದ್ದಾರೆ. ಅವುಗಳಲ್ಲಿ ಕೆಲವನ್ನು ನಾವು ಇಲ್ಲಿ ಹೈಲೈಟ್ ಮಾಡಿದ್ದೇವೆ. ಔಷಧ ವಿತರಣಾ ಸಂಶೋಧನೆ: ಇದು ಔಷಧ ವಿಜ್ಞಾನ ಪದವೀಧರರಿಗೆ ಪ್ರಮುಖ ಕೆಲಸದ ಭಾಗಗಳಲ್ಲಿ ಒಂದಾಗಿದೆ. ಅವರು ಹೊಸ ಔಷಧಗಳು ಮತ್ತು ಸೂತ್ರೀಕರಣಗಳ ಸಂಶೋಧನೆ ಮತ್ತು ಅಭಿವೃದ್ಧಿಯಲ್ಲಿ ತೊಡಗಿಸಿಕೊಳ್ಳಬಹುದು. ಇದರಲ್ಲಿ ಪ್ರಯೋಗಾಲಯದ ಕೆಲಸ ಮಾತ್ರವಲ್ಲದೆ, ಅಪಾಯದ ಮೌಲ್ಯಮಾಪನ, ಕಆಖ, ಇತ್ಯಾದಿಗಳಂತಹ ಯೋಜನಾ ದಾಖಲೆಗಳನ್ನು ಸಿದ್ಧಪಡಿಸುವುದು ಸಹ ಸೇರಿದೆ.




ಪತ್ರಿಕಾ ಪ್ರಕಟಣೆ

ಸಿಂಧನೂರು:ಕರ್ನಾಟಕ ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆಯಾದ ಶಕ್ತಿ ಯೋಜನೆ ಅಡಿಯಲ್ಲಿ ಮಹಿಳೆಯ–ರಿಗೆ ಉಚಿತ ಬಸ್ ಪ್ರಯಾಣ ಸೌಲಭ್ಯ ನೀಡುತ್ತಿರುವ ಹಿನ್ನೆಲೆಯಲ್ಲಿ, ವಿದ್ಯಾರ್ಥಿಗಳಿಗಾಗಿ ವಿಶೇಷ "ವಿದ್ಯಾರ್ಥಿ ರಥ" ಬಸ್ ಸೇವೆಯನ್ನು ಸಿಂಧನೂರಿನಲ್ಲಿ ಪ್ರಾರಂಭಿಸಲಾಗುತ್ತಿದೆ.ಈ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳೊಂದಿಗೆ ಹಾಗೂ ಸಾರ್ವಜನಿಕರೊಂದಿಗೆ ಸಂವಾದ ನಡೆಸುವ ಜಾಗೃತಿ ಸಭೆಯು ದಿನಾಂಕ 05–01–2026 ಸೋಮವಾರ, ಮಧ್ಯಾಹ್ನ 12.30 ಗಂಟೆಗೆ, ಏಖಖಿಅ ಬಸ್ ನಿಲ್ದಾಣ, ಸಿಂಧನೂರು ನಲ್ಲಿ ನಡೆಯಲಿದೆ.ಕಾರ್ಯಕ್ರಮದಲ್ಲಿ ರಾಜ್ಯ ಸರ್ಕಾರದ ಪ್ರತಿನಿಧಿಗಳು, ಸ್ಥಳೀಯ ಜನಪ್ರತಿನಿಧಿಗಳು, ಶಿಕ್ಷಣ ಕ್ಷೇತ್ರದ ಗಣ್ಯರು ಹಾಗೂ ಸಾರಿಗೆ ಇಲಾಖೆ ಅಧಿಕಾರಿಗಳು ಭಾಗವಹಿಸಲಿದ್ದು, ವಿದ್ಯಾರ್ಥಿಗಳಿಗೆ ಶಕ್ತಿ ಯೋಜನೆಯ ಲಾಭಗಳು, ವಿದ್ಯಾರ್ಥಿ ರಥ ಸೇವೆಯ ಉದ್ದೇಶ, ಪ್ರಯೋಜನಗಳು ಹಾಗೂ ಉಪಯೋಗದ ವಿಧಾನಗಳ ಕು–ರಿತು ವಿವರವಾದ ಮಾಹಿತಿ ನೀಡಲಾಗುತ್ತದೆ.ವಿದ್ಯಾರ್ಥಿಗಳ ಶಿಕ್ಷಣ ಸುಗಮಗೊಳಿಸುವ ಉದ್ದೇಶದಿಂದ ಈ ವಿಶೇಷ ಬಸ್ ಸೇವೆ ಆರಂಭಿಸಲಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಸಂಘಟಕರು ಮನವಿ ಮಾಡಿದ್ದಾರೆ.

# ಕರ್ತವ್ಯ ಲೋಪ: ಸಾರಿಗೆ ಸಿಬ್ಬಂದಿ ವಿರುದ್ಧ ಕ್ರಮಕ್ಕೆ ಆಗ್ರಹ

■ ನೈಜ್ಯ ದೆಸೆ ನ್ಯೂಸ್

**ಲಿಂಗಸ್ಗೂರು :** 'ವಿದ್ಯಾರ್ಥಿಗಳೊಂದಿಗೆ ಅನುಚಿತವಾಗಿ ವರ್ತಿಸುವ ಕಲ್ಯಾಣ ಸಾರಿಗೆ ಘಟಕದ ಕೆಲ ಸಂಚಾರಿ ನಿಯಂತ್ರಕರು, ಚಾಲಕ, ನಿರ್ವಾಹಕರ ವಿರುದ್ಧ ಕ್ರಮ ಜರಗಿಸಬೇಕು' ಎಂದು ಆಗ್ರಹಿಸಿ ಕರವೇ(ಎಚ್. ಶಿವರಾಮೇಗೌಡ) ತಾಲ್ಲೂಕು ಘಟಕದ ಪದಾಧಿಕಾ–ರಿಗಳು ಸಾರಿಗೆ ಘಟಕದ ವ್ಯವಸ್ಥಾಪಕರಿಗೆ ಮನವಿ ಸಲ್ಲಿಸಿದರು.ಡಿ.29ರಂದು ಲಿಂಗಸುಗೂರುನಿಂದ ತೊರಲಬೆಂಚಿ ಮಾರ್ಗದ ಬಸ್ (ಕೆಎ 36 ಎಫ್ 1219) ಸಂಜೆ6 ಗಂಟೆಗೆ ತೊರಲಬೆಂಚಿ ಗ್ರಾಮದ ಸುಮಾರು 10ಕ್ಕೂ ಹೆಚ್ಚು ಶಾಲಾ ಕಾಲೇಜು ವಿದ್ಯಾರ್ಥಿಗಳು, ಮಹಿಳಾ ಪ್ರಯಾಣಿಕರನ್ನು ಬಸ್ ಚಾಲಕ ಮತ್ತು ನಿರ್ವಾಹಕ 'ಬಸ್ ಗೇರ್ ಸಮಸ್ಯೆಯಿದೆ' ಎಂದು ಸುಳ್ಳು ನೆಪ ಹೇಳಿ ಈಚನಾಳ ಗ್ರಾಮದಲ್ಲಿ ಇಳಿಸಿ ಬಸ್‌ನಲ್ಲಿ ಹತ್ತಿಸಿಕೊಳ್ಳದೆ ದುರಹಂಕಾರದಿಂದ ವರ್ತಿಸುತ್ತಿದ್ದ ಘಟನೆ ನಡೆದಿದೆ' ಎಂದು ಅವರು ಮಾಹಿತಿ ನೀಡಿದರು.ಸುಳ್ಳು ಹೇಳಿ ಸಾರ್ವಜನಿಕರ ಸೇವೆಗೆ ತೊಂದರೆ ನೀಡಿದ, ಪ್ರಯಾಣಿಕರೊಂದಿಗೆ ಅಸಭ್ಯ ವರ್ತನೆ ತೋ–ರಿದ ಚಾಲಕ ಮತ್ತು ನಿರ್ವಾಹಕ, ಹಾಗೂ ಡಿ.27 ರಂದು ಲಿಂಗಸುಗೂರು ಬಸ್ ನಿಲ್ದಾಣದಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಸಂಚಾರ ನಿಯಂತ್ರಕ ಲಕ್ಷ್ಮಣ ನಾಗರಾಳ ಬಗ್ಗೆ ಮಾಹಿತಿ ಕೇಳಲು ಕೇಳಿದ ಪ್ರಯಾಣಿಕರಿಗೆ ತಪ್ಪು ಮಾಹಿತಿ ನೀಡದಲ್ಲದೆ ಗುಂಡಾ ಪ್ರವೃತ್ತಿ ತೋರಿದ್ದು, ಈ ಕೂಡಲೇ ಮೂರು ಜನ ಸಿಬ್ಬಂದಿಯನ್ನು ಸೇವೆಯಿಂದ ವಜಾ ಮಾಡಬೇಕು ಎಂದು ಆಗ್ರಹಿಸಿದರು.ತಾಲ್ಲೂಕು ಘಟಕದ ಅಧ್ಯಕ್ಷ ಮಾದೇಶ ಸರ್ಜಾಪುರ, ಪ್ರಧಾನ ಕಾರ್ಯದರ್ಶಿ ಶರಣಬಸವ ಈಚನಾಳ, ಮುತ್ತಣ್ಣ ಗುಡಿಹಾಳ, ಮಹಾಂತೇಶ ಹೂಗಾರ, ಜಗನ್ನಾಥ ಜಾಧವ್, ಈಶ್ವರ ವಿಶ್ವಕರ್ಮ, ಪಂಪಣ್ಣ ಜಾಲಿಬೆಂಚಿ, ರಾಘವೇಂದ್ರ ನಾಯಕ, ಅಮರೇಶ ಹುನಕುಂಟಿ, ಅಮರೇಗೌಡ, ದೇವಣ್ಣ ಹಾಗೂ ಇನ್ನಿತರಿದ್ದರು.



# ನೌಕರಿ ಮಾಡುವ ಬದಲು ನೀಡುವ ಗುರಿ ಇರಲಿ: ಸಚಿವ ಶರಣಬಸಪ್ಪ ದರ್ಶನಾಪುರ

■ ನೈಜ್ಯ ದೆಸೆ ನ್ಯೂಸ್



**ಲಿಂಗಸ್ಗೂರು : 'ಶಿಕ್ಷಣ ಕ್ಷೇತ್ರಕ್ಕೆ ಮಠ ಮಾನ್ಯಗಳು ಹಾಗೂ ಖಾಸಗಿ ಶಿಕ್ಷಣ ಸಂಸ್ಥೆಗಳ ಕೊಡುಗೆ ಅಪಾರವಾಗಿದೆ' ಎಂದು ಸಚಿವ ಶರಣಬಸಪ್ಪ ದರ್ಶನಾಪುರ ಹೇಳಿದರು.ಪಟ್ಟಣದಲ್ಲಿ ಶನಿವಾರ ವೀರಶೈವ ವಿದ್ಯಾವರ್ಧಕ ಸಂಘದ ಬಸವೇಶ್ವರ ಪದವಿ ಪೂರ್ವ ಮಹಾವಿದ್ಯಾಲಯದ ಬೆಳ್ಳಿಹಬ್ಬದ ಸಂಭ್ರಮ ಹಾಗೂ ಸರ್ದಾರ ವಲ್ಲಭಭಾಯಿ ಪಟೇಲ್ ಹಾಸ್ಟೆಲ್ ಉದ್ಘಾಟಿಸಿ ಮಾತನಾಡಿದರು.'ಸರ್ಕಾರ ಮಾಡಲಾರದ ಕೆಲಸವನ್ನು ಖಾಸಗಿ ಶಿಕ್ಷಣ ಸಂಸ್ಥೆಗಳು, ಮಠ ಮಾನ್ಯಗಳು ಮಾಡುತ್ತಾ ಬಂದಿವೆ. ವಿದ್ಯೆ ಜತೆ ಅನ್ನದಾಸೋಹ ಮಾಡುವ ಮೂಲಕ ಬಡವಿದ್ಯಾರ್ಥಿಗಳಿಗೆ ಶಿಕ್ಷಣ ನಿಲುಕುವಂತೆ ಮಾಡಿವೆ. ನೌಕರಿ ಮಾಡುವ ಗುರಿ ಬದಲು ನೌಕರಿ ನೀಡುವ ಗುರಿ ಇಟ್ಟು ಅದಕ್ಕೆ ಕಠಿಣ ಪರಿಶ್ರಮ ಪಡಬೇಕು' ಎಂದರು.'ಶಿಕ್ಷಣ ಸಂಸ್ಥೆ ನಡೆಸುವುದು ಸುಲಭದ ಮಾತಲ್ಲ, ವೀರಶೈವ ವಿದ್ಯಾವರ್ಧಕ ಸಂಘದಲ್ಲಿ 4 ಸಾವಿರ ವಿದ್ಯಾರ್ಥಿಗಳು ವಿದ್ಯಾಬ್ಯಾಸ ಮಾಡುತ್ತಿರುವು ಇಲ್ಲಿನ ಗುಣಮಟ್ಟದ ಶಿಕ್ಷಣಕ್ಕೆ ಸಾಕ್ಷಿಯಾಗಿದೆ' ಎಂದರು. ಹಂಪಿ ಕನ್ನಡ ವಿಶ್ವವಿದ್ಯಾಲಯದ ಉಪಕುಲಪತಿ ಡಿ.ವಿ.ಪರಮಶಿವಮೂರ್ತಿ ಮಾತನಾಡಿ, 'ಮೈಸೂರು ಭಾಗದ ಅಭಿವೃದ್ಧಿಗೆ ಹೋಲಿಕೆ ಮಾಡಿದರೆ ಕಲ್ಯಾಣ ಕರ್ನಾಟಕ 15 ವರ್ಷ ಹಿಂದಿದೆ. ಈ ಭಾಗದಲ್ಲಿ ಶಿಕ್ಷಣದ ಬಗ್ಗೆ ಜಾಗೃತಿಯಾಗಿ ಯುವಕರು ಉನ್ನತ ಶಿಕ್ಷಣ ಪಡೆಯುತ್ತಿರುವುದ–ರಿಂದ ಈ ಭಾಗದಲ್ಲಿ ಅಭಿವೃದ್ಧಿಯಾಗುತ್ತಿದೆ' ಎಂದರು. ಕಲ್ಯಾಣ ಸ್ಮರಣ ಗ್ರಂಥವನ್ನು ಶಾಸಕ ಮಾನಪ್ಪ ವಜ್ಜಲ್ ಬಿಡುಗಡೆಗೊಳಿಸಿದರು.ವೀರಶೈವ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಅಮರೇಗೌಡ ಪಾಟೀಲ ಬಯ್ಯಾಪುರ, ವಿಧಾನ ಪರಿಷತ್ ಸದಸ್ಯರಾದ ಶರಣಗೌಡ ಪಾಟೀಲ ಬಯ್ಯಾಪುರ, ಶಶಿಲ್ ನಮೋಶಿ, ವಿವಿ ಸಂಘದ ಕಾರ್ಯದರ್ಶಿ ಭೂಪನಗೌಡ ಕರಡಕಲ್ಲು, ಆಡಳಿತಾಧಿಕಾರಿ ಬಸವಂತರಾಯ ಕುರಿ, ಪ್ರಾಚಾರ್ಯ ಬಸವರಾಜ ಮೇಟಿ, ವೀರೇಶ ಪವಾರ್, ಪ್ರಭುರಾಜ ಮಾಲಿಪಾಟೀಲ ಹಾಗೂ ಇನ್ನಿತರಿದ್ದರು**

# ಗವಿಮಠದ ಜಾತ್ರೆಗೆ ಒಂದೇ ದಿನ 4 ಲಕ್ಷ ಮೈಸೂರು ಪಾಕ್ ತಯಾರಿ

■ ನೈಜ್ಯ ದೆಸೆ ನ್ಯೂಸ್

**ಕೊಪ್ಪಳ :** ಜ 04 ಗವಿಮಠದ ಜಾತ್ರೆಗೆ ಬರುವ ಲಕ್ಷಾಂತರ ಭಕ್ತರಿಗೆ ಸಿಂಧನೂರಿನ ಗವಿಸಿದ್ಧೇಶ್ವರ ಆಗ್ರೋ ಫುಡ್ಸ್ ವಿಜಯಕುಮಾರ್ ಗೆಳೆಯರ ಬಳಗ ತುಪ್ಪದ ಮೈಸೂರು ಪಾಕ್‌ನ ಸವಿ ಉಣಬಡಿಸಲು ಸಿದ್ಧತೆ ಮಾಡಿಕೊಂಡಿದೆ. ಗವಿಮಠದ ಮಹಾದಾಸೋಹದ ಆವರಣದಲ್ಲಿ 100 ಜನ ಮುಖ್ಯ ಬಾಣಸಿಗರು ಹಾಗೂ 100 ಜನ ಸಹಾಯಕರು ಮೈಸೂರು ಪಾಕ್ ತಯಾರಿಸುವ ಕಾರ್ಯವನ್ನು ಶನಿವಾರ ಆರಂಭಿಸಿದ್ದಾರೆ.ಮೊದಲ ದಿನ 30 ಕ್ವಿಂಟಲ್‌ನಲ್ಲಿ ನಾಲ್ಕು ಲಕ್ಷ ಮೈಸೂರು ಪಾಕ್ ತಯಾರಿ ಮಾಡಿದರು. ಭಾನುವಾರವೂ ಈ ಕೆಲಸ ಮುಂದುವರಿಯಲಿದ್ದು, ಇನ್ನೂ ಐದಾರು ಲಕ್ಷ ತಯಾರಿಸುವ ಗುರಿ ಹೊಂದಿದ್ದಾರೆ.ಮೈಸೂರು ಪಾಕ್ ತಯಾರಿಸಲು ಪರಿಣತಿ ಹೊಂದಿರುವ ಬಾಣಸಿಗರು ರಾಯಚೂರು ಜಿಲ್ಲೆ ಹಾಗೂ ಆಂಧ್ರದ ಆದೋನಿಯಿಂದ ಬಂದಿದ್ದಾರೆ. ಮುಖ್ಯ ಬಾಣಸಿಗರಲ್ಲಿ ಬಹುತೇಕರು ಎರಡು ದಶಕಗಳಿಂದ ಇದೇ ಕೆಲಸದಲ್ಲಿ ತೊಡಗಿದ್ದಾರೆ. ಸಿಂಧನೂರಿನ ಗೆಳೆಯರು ಬಳಗದ ಸದಸ್ಯರು ಅನೇಕ ವರ್ಷಗಳಿಂದ ಸಿಹಿ ತಿನಿಸು ಮಾಡಿಸಿ ಸೇವೆಯ ರೂಪದಲ್ಲಿ ಮಠಕ್ಕೆ ಅರ್ಪಿಸುತ್ತಾರೆ. ಮಹಾರಥೋತ್ಸವ ಹಾಗೂ ಅದರ ಮರುದಿನ ಮಠಕ್ಕೆ ಭೇಟಿ ನೀಡುವ ಲಕ್ಷಾಂತರ ಭಕ್ತ–ರಿಗೆ ಸಿಹಿ ಸವಿಯುವ ಅವಕಾಶ ಲಭಿಸುತ್ತದೆ. ಮೈಸೂರು ಪಾಕ್ ತಯಾರಿಕೆಗೆ ಒಟ್ಟು 60 ಕ್ವಿಂಟಲ್ ಸಕ್ಕರೆ, ಐದು ಸಾವಿರ ಲೀಟರ್ ಅಡುಗೆ ಎಣ್ಣೆ, 30 ಕ್ವಿಂಟಲ್ ಕಡಲೆ ಹಿಟ್ಟು, ಐದು ಕ್ವಿಂಟಲ್ ಮೈದಾ, ಮೂರು ಕ್ವಿಂಟಲ್ ತುಪ್ಪ ಹಾಗೂ 50 ಕೆ.ಜಿ. ಯಾಲಕ್ಕಿ ಬಳಕೆ ಮಾಡಲಾಗಿದೆ. ಇದಕ್ಕಾಗಿ □ 18ರಿಂದ □ 20 ಲಕ್ಷ ಖರ್ಚಾಗುತ್ತದೆ ಎಂದು ಅಂ–ದಾಜಿಸಲಾಗಿದೆ.'ಮೊದಲು ನಾಲ್ಕೂವರೆಯಿಂದ ಐದು ಲಕ್ಷ ಮಾತ್ರ ಮೈಸೂರು ಪಾಕ್ ತಯಾ–ರಿಸಲು ಯೋಜಿಸಲಾಗಿತ್ತು. ಈ ಬಾರಿ ಭಕ್ತರ ಸಂಖ್ಯೆ ಹೆಚ್ಚಾಗಲಿರುವ ಕಾರಣ ದುಪ್ಪಟ್ಟು ಮೈಸೂರು ಪಾಕ್ ಮಾಡಲು ನಿರ್ಧರಿಸಲಾಗಿದೆ. ಅನೇಕರು ಗವಿಮಠದ ಸಲುವಾಗಿ ಕೆಲಸ ಮಾಡಲು ಸ್ವಯಂಪ್ರೇರಣೆಯಿಂದ ಬಂದಿದ್ದಾರೆ. ಕೆಲವರಿಗೆ ಮಾತ್ರ ಹಣ ಪಾವತಿಸಲಾಗುತ್ತದೆ' ಎಂದು ಗೆಳೆಯರ ಬಳಗದ ಸದಸ್ಯರು ತಿಳಿಸಿದರು.ಹನುಮರೆಡ್ಡಿ ಹೊಸಮನಿ ಗೆಳೆಯರ ಬಳಗದ ಸದಸ್ಯಗವಿಮಠದ ಜಾತ್ರೆಗೆ ಕಳೆದ ವರ್ಷ ಸಾವಯವ ಬೆಲ್ಲದ ಜಿಲೇಬಿ ಈ ವರ್ಷ ಮೈಸೂರು ಪಾಕ್ ತಯಾರಿಸಲಾಗುತ್ತಿದೆ. ಸ್ವಯಂ



# ಸಿಂಧನೂರು ಜಿಲ್ಲಾ ಕೇಂದ್ರಕ್ಕೆ ಸಂಘಟನೆಗಳ ಸಹಕಾರ ಅಗತ್ಯ



■ ನೈಜ್ಯ ದೆಸೆ ನ್ಯೂಸ್

**ಸಿಂಧನೂರು ಜಿಲ್ಲಾ ಹೋರಾಟ ಸಮಿತಿ ರಚಿಸುವ ಕುರಿತು ನಗರಸಭೆಯಲ್ಲಿ ಶುಕ್ರವಾರ ಸಂಜೆ ಶಾಸಕ ಹಂಪನಗೌಡ ಬಾದರ್ಲಿ ನೇತೃತ್ವದಲ್ಲಿ ವಿವಿಧ ಸಂಘಟನೆಗಳ ಸಭೆ ನಡೆಯಿತು. ಶಾಸಕ ಬಾದರ್ಲಿ ಮಾತನಾಡಿ, ಸಿಂಧನೂರು, ಲಿಂಗಸುಗೂರು, ಮಸ್ಕಿ ಹಾಗೂ ಸಿರವಾರ ಒಳಗೊಂಡು ಜನಸಂಖ್ಯಾಧಾರಿತವಾಗಿ ನೂತನ ಜಿಲ್ಲೆ ರಚನೆಗೆ ಸಂಬಂಧಿಸಿ ಪ್ರಯತ್ನಿಸಬಹುದು.ಈ ನಿಟ್ಟಿನಲ್ಲಿ ಸಂಘಟನೆಗಳು ತೊಡಗಿಸಿಕೊಳ್ಳುವುದು ಮುಖ್ಯ ಎಂದರು.ಪ್ರಮುಖರಾದ ದೇವೇಂದ್ರಗೌಡ, ಡಿ.ಎಚ್.ಪೂಜಾರ್, ವೈ.ನರೇಂದ್ರನಾಥ, ಕೆ.ಭೀಮನಗೌಡ ಹಾಗೂ ಡಾ.ಬಿ.ಎನ್.ಪಾಟೀಲ್ ಮಾತನಾಡಿ, ಆಯಾ ಸಂಘಟನೆಗಳ ಪ್ರಮುಖರು ಒಗ್ಗೂಡಿ ಸಿಂಧನೂರು ಜಿಲ್ಲಾ ಕೇಂದ್ರವಾದರೆ ಏನೆಲ್ಲ ಅನುಕೂಲವಾಗಲಿದೆ ಎಂಬುದರ ಕು–ರಿತು ಉಳಿದ ತಾಲೂಕುಗಳಿಗೆ ಮನವ–ರಿಕೆ ಮಾಡಿಕೊಡಬೇಕಿದೆ. ಈ ನಿಟ್ಟಿನಲ್ಲಿ ಸಮಿತಿ ರಚಿಸಿದರೆ ಅನುಕೂಲವಾಗಲಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.ಸ್ತ್ರೀಶಕ್ತಿ ಸಂಘದ ಶ್ರೀದೇವಿ ಶ್ರೀನಿವಾಸ ಮಾತನಾಡಿ, ಪಕ್ಷಾತೀತವಾಗಿ ಸಮಿತಿ ರಚನೆ ಮಾಡುವ ಮೂಲಕ ಜಿಲ್ಲಾ ಹೋರಾಟವನ್ನು ಮುನ್ನೆಲೆಗೆ ತರಬೇಕಿದೆ. ಈ ನಿಟ್ಟಿನಲ್ಲಿ ಸಂಘಟನೆಗಳ ಮುಖಂಡರು ಕಾಳಜಿ ವಹಿಸಿ ಹೋರಾಟದಲ್ಲಿ ತೊಡಗಿಸಿಕೊಂಡಾಗ ಸರ್ಕಾರದ ಮಟ್ಟದಲ್ಲಿ ನಮ್ಮ ಪರವಾದ ತೀರ್ಮಾನಗಳು ಬರಲು ಸಾಧ್ಯ ಎಂದು ತಿಳಿಸಿದರು.ಸಿಂಧನೂರು ನಗರದಲ್ಲಿ ಜಿಲ್ಲಾಮಟ್ಟದ ಕಚೇರಿಗಳಿಗೆ ಸಂಬಂಧಿಸಿದಂತೆ ಈಗಾಗಲೇ ಜಿಲ್ಲಾ ಕೋರ್ಟ್ ಕಾರ್ಯನಿರ್ವಹಿಸುತ್ತಿದೆ. ಜಿಲ್ಲಾ ಆಸ್ಪತ್ರೆ ಮಂಜೂರಾಗಿದೆ. ಸುಡಾ, ಕೆಇಬಿ ಕಾರ್ಯಾಲಯ, ಆರ್‌ಟಿಒ ಕಚೇರಿ ಇದೆ. ಡಿಡಿಪಿಐ ಕಚೇರಿ, ಹೆಚ್ಚುವರಿ ಎಸ್ಪಿ ಕಚೇರಿ ಆರಂಭವಾಗಬೇಕಿದೆ. ಈ ನಿಟ್ಟಿನಲ್ಲಿ ಪ್ರಯತ್ನ ನಡೆದಿದೆ ಎಂದು ತಿಳಿಸಿದ ಶಾಸಕರು, ಸಿಂಧನೂರು ಜಿಲ್ಲೆ ಆಗಬೇಕೆಂಬುದು ಎಲ್ಲರ ಆಸೆಯಾಗಿದೆ. ಈ ನಿಟ್ಟಿನಲ್ಲಿ ಪ್ರತಿಯೊಂದು ಸಂಘಟನೆ ತೊಡಗಿಸಿಕೊಳ್ಳಬೇಕು ಎಂದರು. ಸಂಸದ ರಾಜಶೇಖರ ಹಿಟ್ನಾಳ, ಕೃಷಿ ಬೆಲೆ ಆಯೋಗ ಮಾಜಿ ಅಧ್ಯಕ್ಷ ಹನುಮನಗೌಡ ಬೆಳಗುರ್ಕಿ ಹಾಗೂ ವಿವಿಧ ಸಂಘಟನೆಗಳ ಮುಖಂಡರು, ಕಾರ್ಯಕರ್ತರು ಇದ್ದರು.**

# ಕಿದ್ವಾಯಿ ಫೆರಿಫೆರಲ್‌ಕ್ಯಾನ್ಸರ್ ಚಿಕಿತ್ಸಾ ಘಟಕದ ಕಟ್ಟಡ ಕಾಮಗಾರಿಗೆ ಸಚಿವರಿಂದ ಶಂಕುಸ್ಥಾಪನೆ

■ ನೈಜ್ಯ ದೆಸೆ ನ್ಯೂಸ್



**ರಾಯಚೂರು ಜನವರಿ 04 (ಕ.ವಾ.):** ರಾಯಚೂ–ರಿನ ರಾಜೀವಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಆವರಣದಲ್ಲಿ ಕಿದ್ವಾಯಿ ಫೆರಿಫೆರಲ್ ಕ್ಯಾನ್ಸರ್ ಚಿಕಿತ್ಸಾ ಘಟಕ ನಿರ್ಮಿಸುವ ಅಂದಾಜು ಮೊತ್ತ 2000 ಲಕ್ಷ ರೂ ಮೊತ್ತದ ಕಟ್ಟಡ ಕಾಮಗಾ–ರಿಗೆ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಹಾಗೂ ಎನ್ ಎಸ್ ಬೋಸರಾಜು ಅವರು ನಗರದ ರಾಜೀವಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಆವರಣದಲ್ಲಿ ಶಂಕುಸ್ಥಾಪನೆ ನೆರವೇರಿಸಿದರು. ಜಿಲ್ಲಾಡಳಿತ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಮತ್ತು ರಿಮ್ಸ್ ಇವರ ಸಹಯೋಗದಲ್ಲಿ ನಗರದ ರಾಜೀವಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಆವರಣದಲ್ಲಿ ಜನವರಿ 4ರಂದು ನಡೆದ ಕಾರ್ಯಕ್ರಮದಲ್ಲಿ, ಅಂದಾಜು ಮೊತ್ತ 450.00 ಲಕ್ಷ ರೂ.ಗಳ ವೆಚ್ಚದಲ್ಲಿ ರಾಯಚೂರು ನಗರದ ರಿಮ್ಸ್ ಸಂಸ್ಥೆಯ ಆವರಣದಲ್ಲಿ ನಿರ್ಮಾಣಗೊಂಡ ಬಿ.ಎಸ್ಸಿ. ನರ್ಸಿಂಗ್ ವಿದ್ಯಾರ್ಥಿನಿಯರ ವಸತಿ ನಿಲಯ ಕಟ್ಟಡವನ್ನು ಸಹ ಇದೆ ವೇಳೆ ಸಚಿವರು ಉದ್ಘಾಟಿಸಿದರು. ಈ ವೇಳೆ ಸಚಿವರಾದ ಎನ್ ಎಸ್ ಬೋಸರಾಜು ಮಾತನಾಡಿ, ಈ ಕೇಂದ್ರವು ರಾಯಚೂರಲ್ಲಿ ಆಗಬೇಕು ಎಂಬುದು ನಮ್ಮ ಬಹುದಿನಗಳ ಅಪೇಕ್ಷೆಯಾಗಿತ್ತು. ಆ ಕನಸು ಈಗ ಸಾಕಾರವಾಗಿದೆ. ಡಾ.ಶರಣಪ್ರಕಾಶ ಪಾಟೀಲ ಅವರು ವೈದ್ಯಕೀಯ ಇಲಾಖೆಯ ಸಚಿವರಾಗಿದ್ದ–ರಿಂದಾಗಿ ನಮ್ಮಲ್ಲಿ ಈ ಹೊಸ ಕಟ್ಟಡ ನಿರ್ಮಾಣ ಕಾರ್ಯ ಆರಂಭವಾಗುತ್ತಿದೆ ಎಂದು ತಿಳಿಸಿದರು. ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಅವರು ಮಾತನಾಡಿ, ರಾಯಚೂರಿನ ಒಪೆಕ್ ಆಸ್ಪತ್ರೆ ಎಲ್ಲ ವಿಭಾಗಗಳು ಉತ್ತಮವಾಗಿದೆ ಕಾರ್ಯನಿರ್ವಹಿಸುತ್ತಿವೆ. ಇದರಿಂದಾಗಿ ಜಿಲ್ಲೆಯ ಜನತೆಗೆ ಸಾಕಷ್ಟು ಅನುಕೂಲವಾಗಿದೆ ಎಂದರು. ರಾಯಚೂರಿಗೆ ಟ್ರಾಮಾ ಕೇರ್ ಸೆಂಟರ್ ನಿರ್ಮಾಣ ಹಾಗೂ ಕ್ಯಾನ್ಸರ್ ಆಸ್ಪತ್ರೆ ನಿರ್ಮಾಣದ ಬಗ್ಗೆ ಬಜೆಟ್ ನಲ್ಲಿ ಘೋಷಣೆ ಮಾಡಲಾಗಿತ್ತು. ಈಗಾಗಲೇ ಟ್ರಾಮಾ ಸೆಂಟರ್ ನಿರ್ಮಾಣವಾಗಿದೆ. ಇದೀಗ ಮೊದಲನೇ ಹಂತದಲ್ಲಿ 20 ಕೋಟಿ ರೂ ವೆಚ್ಚದಲ್ಲಿ ಕ್ಯಾನ್ಸರ್ ಆಸ್ಪತ್ರೆ ನಿರ್ಮಾಣ ಕಾರ್ಯ ನಡೆಯುತ್ತಿದೆ. ಈಗಾಗಲೇ ಒಪೆಕ್ ಆಸ್ಪತ್ರೆ ಆವರಣದಲ್ಲಿನ ಎಲ್ಲ ರಸ್ತೆಗಳನ್ನು ಸರಿಪಡಿಸಲಾಗಿದೆ. ಇಂತಹ ಅಭಿವೃದ್ಧಿ ಕಾರ್ಯಗಳು ನಿರಂತರ ನಡೆಯುತ್ತಿವೆ ಎಂದು ತಿಳಿಸಿದರು. ಬಡ ಮಕ್ಕಳಿಗೆ ಸಹ ವೈದ್ಯಕೀಯ ಶಿಕ್ಷಣ ಸಿಗಬೇಕು ಎಂದು ಆಲೋಚಿಸಿ ನಾವು ಈಗಾಗಲೇ ರಾಜ್ಯದಲ್ಲಿ 22 ಸರ್ಕಾರಿ ಮೆಡಿಕಲ್ ಕಾಲೇಜ್ ಸ್ಥಾಪನೆ ಮಾಡಿದ್ದೇವೆ. ಈ ಬಾರಿಯ ಬಜೆಟನಲ್ಲಿ ಮತ್ತೆ 3 ಮೆಡಿಕಲ್ ಕಾಲೇಜ್ ನಿರ್ಮಾಣದ ಘೋಷಣೆ ಮಾಡಿದ್ದೇವೆ ಎಂದರು. ಯುನಿವರ್ಸಲ್ ಹೆಲ್ತ್ ಕವರೇಜ್ ದೂರದೃಷ್ಟಿಯ ವಿಚಾರದಡಿಯಲ್ಲಿ ನಾವು ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಕ್ಯಾನ್ಸರ್ ಆಸ್ಪತ್ರೆ, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣದಂತ ಕಾರ್ಯ ಯೋಜನೆ ಹೊಂದಿದ್ದೇವೆ ಎಂದು ಸಚಿವರು ತಿಳಿಸಿದರು. ಅಜಿಂ ಪ್ರೇಮಜಿ ಅವರ ಸಹಯೋಗದಲ್ಲಿ ಒಂದು ವಿಶೇಷ ಆಸ್ಪತ್ರೆಯನ್ನು ಮುಂದಿನ ಮೂರು ವರ್ಷದೊಳಗೆ ನಿರ್ಮಾಣ ಮಾಡಲು ಯೋಜಿಸಲಾಗಿದೆ. ರಾಜ್ಯ ಸರ್ಕಾರವು ಆರೋಗ್ಯ ಕ್ಷೇತ್ರಕ್ಕೆ ವಿಶೇಷ ಒತ್ತು ನೀಡಿದೆ. ಜನತೆ ಆರೋಗ್ಯ ಯೋಜನೆಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ರಾಯಚೂರು ಜಿಲ್ಲೆಯ ಜನತೆಯಲ್ಲಿ ಸಚಿವರು ಮನವಿ ಮಾಡಿದರು. ಸಮಾರಂಭದಲ್ಲಿ ಶಾಸಕರಾದ ಬಸನಗೌಡ ದದ್ದಲ್, ಎ ವಸಂತಕುಮಾರ, ಮುಖಂಡರಾದ ಪವನ ಕಿಶೋರ ಪಾಟೀಲ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಎಸ್ಪಿ ಅರುಣಾಂಕ್ಷು ಗಿರಿ, ಕಿದ್ವಾಯಿ ಸ್ಮಾರಕ ಗ್ರಂಥಿ ಸಂಸ್ಥೆಯ ನಿರ್ದೇಶಕರಾದ ಡಾ.ನವೀನ್ ಟಿ., ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ರಿಮ್ಸ್ ನಿರ್ದೇಶಕರಾದ ಡಾ.ರಮೇಶ ಬಿ ಎಚ್., ರಾಜೀವಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ನಿರ್ದೇಶಕರಾದ ಡಾ.ರಮೇಶ ಸಿ ಸಾಗರ, ರಿಮ್ಸ್ ನ ಮುಖ್ಯ ಆಡಳಿತಾಧಿಕಾರಿ ಡಾ.ಗುರುಸಿದ್ದಯ್ಯ, ಆರ್ಥಿಕ ಅಧಿಕಾರಿ ಚನ್ನಮ್ಮ, ಡಿಎಚ್‌ಓ ಡಾ.ಸುರೇಂದ್ರಬಾಬು ಹಾಗು ಇತರರು ಇದ್ದರು. ಡಾ.ದಂಡಪ್ಪ ಬಿರಾದಾರ ನಿರೂಪಿಸಿದರು. ಡಾ.ಡಾ.ಡಿ.ಮಂಡೋಲಿಕರ ವಂದಿಸಿದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101